ಸಂಪುಟ : 10 ಸಂಚಿಕೆ 21 ಪುಟ : 4+2 ಬೆಲೆ: 3.00 ಮಂಗಳವಾರ ಫೆಬ್ರವರಿ 18 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 21 Pages : 4+2 Price : 3.00 Tuesday February 18 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಸಂತೋಷ ಲಾಡ್ ಭೇಟಿ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಕಾರ್ಮಿಕ ಇಲಾಖೆ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಫೆ.18ರಂದು ಮಧ್ಯಾಹ್ನ 2ಕ್ಕೆ ಭೇಟಿ ನೀಡುವರು.

ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕು ಎಂದು ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

## ವಿದ್ಯಾರ್ಥಿಗಳ, ಪೋಷಕರ ಗಮನಕ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರದಿಂದ ಜಾತಿ/ ಆದಾಯ ಪ್ರಮಾಣ ಪತ್ರ ಪಡೆಯಲು ವಿಳಂಬವಾಗುತ್ತಿದ್ದು , ವಿದ್ಯಾರ್ಥಿಗಳ ಹಾಗೂ ಅಭ್ಯರ್ಥಿಗಳ ಅನುಕೂಲಕ್ಕಾಗಿ ಸಹಾಯಕ ಆಯುಕ್ತರ ಕಾರ್ಯಾಲಯದಲ್ಲಿ ಸಹಾಯವಾಣಿಯನ್ನು ಸ್ಥಾಪಿಸಲಾಗಿದೆ. ಪರೀಕ್ಷೆ ಹಾಗೂ ನೇಮಕಾತಿ ಉದ್ದೇಶಗಳಿಗಾಗಿ ತ್ವರಿತವಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅವಶ್ಯಕತೆಯಿರುವ ವಿದ್ಯಾರ್ಥಿಗಳು/ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 08372-238042 ನ್ನು ಸಂಪರ್ಕಿಸಬಹುದಾಗಿದೆ.

ಜಾತಿ ಮತ್ತು ಆದಾಯ ಪ್ರಮಾಣ ಪತ್ರಕ್ಕೆ ಸಂಬಂಧಿಸಿದಂತೆ ಸ್ವೀಕೃತ ಕರೆಗಳಿಗೆ ಕೂಡಲೇ ಸ್ಪಂದಿಸಿ ಕ್ರಮ ವಹಿಸಲಾಗುವುದು. ವಿದ್ಯಾರ್ಥಿಗಳು ಹಾಗೂ ಪೋಷಕರು ಆತಂಕ ಪಡುವ ಅಗತ್ಯವಿಲ್ಲವೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್. ಪಾಟೀಲ

# ನಮ್ಮ ಒಗ್ಗಟ್ಟನ್ನು ಒಡೆಯುವುದು ಸುಲಭವಲ್ಲ

■ವಿಜಯಸಾಕ್ಷಿ ಸುದ್ದಿ, ರೋಣ

ಏಕತೆ, ಸಹೋದರತೆ ನಮ್ಮ ಭಾರತ ದೇಶದ ಭವ್ಯ ಸಂಸ್ಕೃತಿಯಾಗಿದ್ದು, ದೇಶ ಬಹು ಭಾಷೆಗಳ, ಬಹು ಜನಾಂಗದ, ಅನೇಕ ಸಂಸ್ಕೃತಿಗಳನ್ನು ಹೊಂದಿದ ಪುಣ್ಯ ಭೂಮಿಯಾಗಿದೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಅಭಿಪ್ರಾಯಪಟ್ಟರು.

ಅವರು ಆಝಾದ ಯುವಕ ಸಂಘ ಹಾಗೂ ತಲಾಬಕಟ್ಟಾ ಮಕಾನ ಕಮಿಟಿ ಆಶ್ರಯದಲ್ಲಿ ಹಜರತ್ ಮುಹಮ್ಮದ ಪೈಗಂಬರರ ಜನ್ಮದಿನಾಚರಣೆ ನಿಮಿತ್ತ ಹಮ್ಮಿಕೊಂಡಿದ್ದ ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಭಾರತ ದೇಶ ಇಡೀ ವಿಶ್ವಕ್ಕೆ ಮಾದರಿಯಾಗಿದ್ದು, ಇತಿಹಾಸದುದ್ದಕ್ಕೂ ಇಲ್ಲಿನ ಜನರು ಸಹಬಾಳ್ವೆಗೆ ಹೆಸರಾಗಿದ್ದಾರೆ. ಹೀಗಾಗಿ ಇಲ್ಲಿನ ಜನರ ಒಗ್ಗಟ್ಟನ್ನು ಒಡೆಯುವುದು ಸುಲಭವಲ್ಲ. ಮುಖ್ಯವಾಗಿ ಎಲ್ಲ ಧರ್ಮಗಳೂ ಮಾನವನ ಒಳಿತನ್ನು ಬಯಸಿವೆಯೇ ಹೊರತು ಕೇಡನ್ನಲ್ಲ ಎಂಬುದನ್ನು ಇಂದಿನ ಪೀಳಿಗೆ ಅರಿಯಬೇಕಿದೆ ಎಂದರು.

ಮಾಜಿ ಸಚಿವ ಎ.ಎಂ. ಹಿಂಡಸಗೇರಿ ಮಾತನಾಡಿ, ನಮ್ಮ ದೇಶದ ನೆಲವು ಸಂತರು, ಸೂಫಿಗಳು ಸಂಚಾರ ಮಾಡಿರುವ ಪುಣ್ಯಭೂಮಿಯಾಗಿದೆ. ಇಲ್ಲಿ ಸರ್ವಧರ್ಮದವರೂ ಸಮನ್ವಯತೆಯಿಂದ ಬಾಳುತ್ತಿದ್ದೇವೆ. ರೋಣ ನಗರದಲ್ಲಿ 25 ವರ್ಷಗಳಿಂದ ಸರ್ವಧರ್ಮದವರ ಸಾಮೂಹಿಕ ವಿವಾಹಗಳನ್ನು ನಡೆಸಿಕೊಂಡು ಬರುತ್ತಿರುವುದು ಹೆಮ್ಮೆಯ ಸಂಗತಿಯಾಗಿದ್ದು, ರೋಣ ನಗರದ ಸಮಸ್ತ ಜನತೆಯ ಸಹಕಾರದಿಂದ ಇದು ಸಾಧ್ಯವಾಗಿದೆ ಎಂದರು.



ಹಜರತ ಸೈಯ್ಯದ ನಿಜಾಮುದ್ದೀನ್ ಷಾ ಅರ್ಷಾಫಿ ಅವರು ಮಾತನಾಡಿ, ಇಂದು ದಾಂಪತ್ಯ ಜೀವನಕ್ಕೆ ಕಾಲಿಡುತ್ತಿರುವ ನೀವು ತಾಯಿ ಪಾದದಲ್ಲಿ ಸ್ವರ್ಗ, ತಂದೆ ಅದರ ಬಾಗಿಲು ಎನ್ನುವುದನ್ನು ಮರೆಯಬೇಡಿ. ತಂದೆ-ತಾಯಿಗಳನ್ನು ಪ್ರೀತಿಯಿಂದ ಕಂಡಾಗ ನಿಮ್ಮ ಬದುಕು ಸಾರ್ಥಕವಾಗುತ್ತದೆ ಎಂದರು.

> ಹೆಣ್ಣು ಹೆಂಡತಿಯಾಗಿ, ಗಂಡು ಗಂಡನಾಗಿ ಜೀವನ ನಡೆಸುವುದೇ ದಾಂಪತ್ಯ. ಹೀಗಾಗಿ ನೂತನ ವಧು-ವರರು ಸಮಾಜಮುಖಿ ಬದುಕನ್ನ ಕಟ್ಟಿಕೊಂಡು ಸುಂದರ ಜೀವನ ನಡೆಸಬೇಕು.
> **- ಅಭಿನವ ಮೃತ್ಯುಂಜಯ ಶ್ರೀಗಳು.**

ಶಫೀಕ ಮೂಗನೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಾನ್ನಿಧ್ಯವನ್ನು ಮಣಕವಾಡ ಶ್ರೀಮಠದ ಅಭಿನವ ಮೃತ್ಯುಂಜಯ ಶ್ರೀಗಳು, ನೇತೃತ್ವವನ್ನು ಹಜರತ ಸುಲೇಮಾನ ಶ್ಯಾವಲಿ ಅಜ್ಜನವರು, ಹಜರತ ಸೈಯದ ನಿಜಾಮುದ್ದೀನ್ ಷಾ ಅರ್ಷಾಫಿ ಅಜ್ಜನವರು ವಹಿಸಿದ್ದರು.

ಕಬೀರ ಗ್ರೂಪ್ ಅಧ್ಯಕ್ಷ ಎಸ್.ಎ. ಕಬೀರ, ಪುರಸಭೆ ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ, ಸಂಗನಗೌಡ ಪಾಟೀಲ, ಆನಂದ ಗಡ್ಡದೇವರಮಠ, ಬಾವಾಸಾಬ ಬೆಟಗೇರಿ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಮಹಾದೇವಗೌಡ ಲಿಂಗನಗೌಡ್ರ, ಸಂಜಯ ರೆಡ್ಡೇರ, ಮೌನೇಶ ಹಾದಿಮನಿ, ಸಂಜಯ ದೊಡ್ಡಮನಿ ಸೇರಿದಂತೆ ಪುರಸಭೆಯ ಸದಸ್ಯರು, ಮುಖಂಡರು ಉಪಸ್ಥಿತರಿದ್ದರು.

### ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯಾಗಾರ ಫೆ. 20ಕ್ಕೆ

# ಚುನಾಯಿತ ನಿರ್ದೇಶಕರ, ಪದಾಧಿಕಾರಿಗಳ ಸಮಾವೇಶ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಮೇತ್ರಿ ವೃತ್ತದ ಹತ್ತಿರ ಅರಮನೆ ಆವರಣ ತ್ರಿಪುರವಾಸಿನಿಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಬೆಂಗಳೂರು ನಗರ ರಾಜ್ಯ ಪರಿಷತ್ ಸದಸ್ಯರ ಹಾಗೂ ಜಿಲ್ಲೆ-ತಾಲೂಕು ಶಾಖೆಗಳ ನಿರ್ದೇಶಕರ-ಪದಾಧಿಕಾರಿಗಳ ಸಮಾವೇಶ ಹಾಗೂ ಕಾರ್ಯಾಗಾರ ಫೆ. 20ರಂದು ಬೆಳಿಗ್ಗೆ 11.45ಕ್ಕೆ ಜರುಗಲಿದೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾದ್ಯಕ್ಷ ಸಿ.ಎಸ್. ಷಡಾಕ್ಷರಿ ಹಾಗೂ ರಾಜ್ಯ ಹಿರಿಯ ಉಪಾಧ್ಯಕ್ಷ ರವಿ ಗುಂಜೀಕರ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ಧರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಈ ಕಾರ್ಯಕ್ರಮಕ್ಕೆ ರಾಜ್ಯದ ಎಲ್ಲಾ ಜಿಲ್ಲೆ, ತಾಲೂಕು ಶಾಖೆಗಳಿಂದ ಸುಮಾರು 10 ಸಾವಿರಕ್ಕೂ ಹೆಚ್ಚು ಸಂಘದ ಚುನಾಯಿತ ನಿರ್ದೇಶಕರು ಮತ್ತು ಪದಾಕಾರಿಗಳು ಭಾಗವಹಿಸಲಿದ್ದಾರೆ.



ಫೆ. 20ರಂದು ಬೆಳಿಗ್ಗೆ 10ಕ್ಕೆ 'ಪ್ರಜಾಸ್ನೇಹಿ ಆಡಳಿತ ಕಾರ್ಯಾಗಾರ' ಆಯೋಜಿಸಿದ್ದು, ಆಡಳಿತದಲ್ಲಿ ದಕ್ಷತೆ, ಪಾರದರ್ಶಕತೆ, ಪ್ರಾಮಾಣಿಕತೆ ವಿಷಯ ಕುರಿತಂತೆ ಕರ್ನಾಟಕ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಉಪನ್ಯಾಸ ನೀಡಲಿದ್ದಾರೆ.

'ಸಾರ್ವಜನಿಕ ಸೇವೆಯಲ್ಲಿ ನೌಕರರ ಪಾತ್ರ' ವಿಷಯ ಕುರಿತಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಉಪನ್ಯಾಸ ನೀಡಲಿದ್ದಾರೆ. 'ಮಾಹಿತಿ ಹಕ್ಕು ಅಧಿನಿಯಮ(2005) ಸವಾಲುಗಳು - ಪರಿಹಾರಗಳು' ವಿಷಯವಾಗಿ ರಾಜ್ಯ ಮಾಹಿತಿ ಆಯೋಗದ ಕಲಬುರಗಿ ಪೀಠದ ಆಯುಕ್ತರಾದ ರವೀಂದ್ರ ಗುರುನಾಥ ಧಾಕಪ್ಪ ಉಪನ್ಯಾಸ ನೀಡಲಿದ್ದಾರೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಆಯೋಜಿಸಿರುವ ಈ ಸಮಾವೇಶ ಹಾಗೂ ಕಾರ್ಯಾಗಾರದಲ್ಲಿ ಸಂಘದ ಪದಾಧಿಕಾರಿಗಳು, ನಿರ್ದೇಶಕರು, ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಜಿಲ್ಲಾಡಳಿತದಿಂದ ಶಿವಾಜಿ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಫೆಬ್ರವರಿ 19 ರಂದು ಬೆ 11 ಗಂಟೆಗೆ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಹಮ್ಮಿಕೊಳ್ಳಲಾಗಿದೆ. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್ , ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ ಆಗಮಿಸುವರು. ನಿವೃತ್ತ ಉಪನ್ಯಾಸಕರಾದ ಪ್ರೊ.ಹನಮಂತ ಎನ್ ಕಾಳೆ ಅವರು ಛತ್ರಪತಿ ಶಿವಾಜಿ ಮಹಾರಾಜರ ಜೀವನ ಮತ್ತು ಸಾಧನೆ ಕುರಿತು ಉಪನ್ಯಾಸ ನೀಡುವರು. ವೀರೇಶ್ವರ ಪುಣ್ಯಾಶ್ರಮದ ಕು. ಅನಿಲಕುಮಾರ್ ಸುಗಮ ಸಂಗೀತ ಪ್ರಸ್ತುತ ಪಡಿಸುವರು. ಆಮಂತ್ರಿತರಾಗಿ ಮರಾಠಾ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಅರುಣಕುಮಾರ ಚವ್ಹಾಣ, ಜಿಲ್ಲಾ ಕ್ಷತ್ರಿಯ ಮಹಾಸಭಾ ಅಧ್ಯಕ್ಷರಾದ ಶ್ರೀಕಾಂತ ಖಟವಟೆ, ಮರಾಠಾ ಸಮಾಜದ ಗಣ್ಯರಾದ ಮೋಹನರಾವ್ ಗ್ವಾರಿ, ರಾಜಮಾತಾ ಜೀಜಾಬಾಯಿ ಮಹಿಳಾ ಮಂಡಳದ ಅಧ್ಯಕ್ಷರಾದ ಶ್ರೀಮತಿ ಶೃತಿ ವಿ ಗ್ವಾರಿ ಆಗಮಿಸುವರು. ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸ್ವಾಗತ ಕೋರಿದ್ದಾರೆ.

## ರಾಷ್ಟ್ರೀಯ ಲೋಕ ಅದಾಲತ್ ಮಾರ್ಚ್ 8ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗೌರವಾನ್ವಿತ ಕರ್ನಾಟಕ ಉಚ್ಛ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ 8-03-2025ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ.

ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಬಸವರಾಜ ತಿಳಿಸಿದ್ದಾರೆ.



ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್.ಎಮ್. ಆರ್.ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು 08-03-2025ರಂದು ಜರಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಾರ್ಖಾನೆಗಳಿಂದ ಬಾಧಿತವಾದ ಪ್ರದೇಶಗಳಲ್ಲಿ ಜನ ಜಾಗೃತಿ ಜಾಥಾಕ್ಕೆ ಚಾಲನೆ

# ಕಾರ್ಖಾನೆಗಳಿಂದ ಆಗುತ್ತಿರುವ ನಷ್ಟವೇ ಹೆಚ್ಚು

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ನೇತೃತ್ವದಲ್ಲಿ ವಿವಿಧ ಸಂಘಟನೆಗಳು ಆರಂಭಿಸಿರುವ 'ಕಾರ್ಖಾನೆ ತೊಲಗಿಸಿ-ಕೊಪ್ಪಳ ಉಳಿಸಿ' ಜನಾಂದೋಲನದ ಭಾಗವಾಗಿ ಜನಜಾಗೃತಿ ಕಾರ್ಯಕ್ರಮಕ್ಕೆ ತಾಲೂಕಿನ ಗಿಣಿಗೇರಿ ಗ್ರಾಮದಲ್ಲಿ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಹಿರಿಯ ಬಂಡಾಯ ಸಾಹಿತಿ ಅಲ್ಲಮಪ್ರಭು ಬೆಟ್ಟದೂರು, ನಮ್ಮಲ್ಲಿ ಈಗಿರುವ ಕಾರ್ಖಾನೆಗಳಿಂದ ಧೂಳು, ವಿಷ ಮತ್ತು ಪರಿಸರ ಮಾಲಿನ್ಯವನ್ನು ಎದುರಿಸಿದ್ದೇವೆ ಹೊರತು ನಮಗೆ ಯಾವುದೇ ಪ್ರಯೋಜನವಾಗಿಲ್ಲ. ಇದರ ಮೇಲೆ ಬೆಂಕಿಗೆ ತುಪ್ಪ ಸುರಿದ ಹಾಗೆ ಹೊಸ ಕಾರ್ಖಾನೆ ನಮ್ಮನ್ನು ಸಂಪೂರ್ಣವಾಗಿ ಸುಡಲು ಬರುತ್ತಿರುವದು ದುರಂತವೇ ಸರಿ. ಯಾವುದೇ ಕಾರಣಕ್ಕೂ ಜನರು ಅದನ್ನು ಆಗಲು ಬಿಡುವದಿಲ್ಲ. ಜನರು ಎಚ್ಚರಗೊಳ್ಳಬೇಕು ಎಂದು ಕರೆ ನೀಡಿದರು.



> ಯುವ ಮುಖಂಡ ಮಂಜುನಾಥ ಜಿ.ಗೊಂಡಬಾಳ ಮಾತನಾಡಿ, ಇಲ್ಲಿನ ಕಾರ್ಖಾನೆಗಳಿಂದ ಜನ ರೋಗಗಳನ್ನು ಪಡೆದಿದ್ದಾರೆ. ಆಹಾರವೇ ವಿಷವಾಗಿ ಆಯುಷ್ಯವೇ ಅರ್ಧಕ್ಕೆ ಬಂದಿರುವದು ದುರಾದೃಷ್ಟಕರ. ಇಲ್ಲಿ ಕಾರ್ಖಾನೆಗಳು ಬಂದರೂ ಇಲ್ಲಿಯ ಜನರಿಗೆ ಕೆಲಸ ಸಿಗುವದಿಲ್ಲ, ಕಮ್ಮಿ ಸಂಬಳಕ್ಕೆ ಕೆಲಸ ಮಾಡುವ ಉತ್ತರದ ಜನರನ್ನು ಕರೆತರುತ್ತಾರೆ. ಫೆ. 24ರಂದು ಕೊಪ್ಪಳ ಭಾಗ್ಯನಗರ ಬಂದ್‌ನಲ್ಲಿ ಎಲ್ಲರೂ ಭಾಗವಹಿಸಿಬೇಕು ಎಂದು ಕರೆ ನೀಡಿದರು.

ಸಿಂಧನೂರಿನ ಪ್ರಗತಿಪರ ಹೋರಾಟಗಾರ ಎಚ್.ಎನ್. ಬಡಿಗೇರ್ ಮಾತನಾಡಿ, ಇಲ್ಲಿನ ಜನ - ಜಾನುವಾರುಗಳು, ಕೃಷಿ, ಜನಜೀವನವನ್ನೇ ಹಾಳು ಮಾಡಿರುವ ಇಲ್ಲಿನ ಕಾರ್ಖಾನೆಗಳು ಅವೈಜ್ಞಾನಿಕವಾಗಿ ಒಂದೇ ಕಡೆಗೆ ಬೀಡುಬಿಟ್ಟು ಇಲ್ಲಿನ ಪರಿಸರ ಹಾಳು ಮಾಡಿರುವದರಿಂದ ತೀವ್ರ ಸ್ವರೂಪದ ಹೋರಾಟ ಅಗತ್ಯವಿದೆ. ಅದಕ್ಕಾಗಿ ಈ ಆಂದೋಲನದ ಭಾಗವಾಗಿ ಬಂದಿದ್ದೇವೆ ಜನ ಸಹಕಾರ ಕೊಡಬೇಕು ಎಂದರು.

ಅಖಿಲ ಭಾರತ ಕಾರ್ಮಿಕ ಸಂಘಟನೆಗಳ ಒಕ್ಕೂಟ-ದ ಜಿಲ್ಲಾಧ್ಯಕ್ಷ ಬಸವರಾಜ ಶೀಲವಂತರ್, ಕರ್ನಾಟಕ ರೈತ ಸಂಘ (ಎಐಯುಕೆಎಸ್) ರಾಜ್ಯ ಅಧ್ಯಕ್ಷ ಡಿ.ಹೆಚ್. ಪೂಜಾರ್, ಗಿಣಿಗೇರಾ ನಾಗರಿಕ ಹೋರಾಟ ಸಮಿತಿ ಮುಖಂಡ ಮಂಗಳೇಶ್ ರಾಥೋಡ್ ಮಾತನಾಡಿದರು.

ವಿವಿಧ ಸಂಘಟನೆಗಳ ಮುಖಂಡರಾದ ಮೂಕಪ್ಪ ಮೇಸ್ತ್ರಿ, ತಿಮ್ಮಣ್ಣ ಕನಕಗಿರಿ, ಶರಣು ಗಡ್ಡಿ, ಎಸ್.ಎ. ಗಫಾರ್, ಬಿ.ಎನ್. ಯರದಿಹಾಳ, ಮುದುಕಪ್ಪ ಹೊಸಮನಿ, ಸುಂಕಪ್ಪ ಮೀಸಿ, ರಮೇಶ್ ಬೇಳೂರು, ರಮೇಶ್ ಪಾಟೀಲ್ ಬೇರಗಿ, ಕಾಶಪ್ಪ ಚಲವಾದಿ, ರಾಘು ಚಾಕರಿ, ಮಂಜುನಾಥ ದೊಡ್ಡಮನಿ ಮುಂತಾದವರು ಭಾಗವಹಿಸಿದ್ದರು.

## ಸಂಪಾದಕೀಯ

# ಜಿಪಂ, ತಾಪಂ ಚುನಾವಣೆ ನಡೆಸುವ ಶಕ್ತಿ ಸರಕಾರಕ್ಕೆ ಇಲ್ಲ

ಮೂರು ವರ್ಷಗಳಿಂದ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆ ನಡೆಸದೇ, ಒಂದಿಲ್ಲೊಂದು ಸಬೂಬು ಹೇಳುತ್ತಾ ಚುನಾವಣೆಯನ್ನು ಮುಂದೂಡುತ್ತಿದ್ದ ಸರಕಾರ, ಈಗ ಚುನಾವಣೆಯ ನಡೆಸುವುದಾಗಿ ಹೇಳುತ್ತಿದೆ.

ರಾಜ್ಯ ಸರ್ಕಾರದ ವಿಳಂಬ ನೀತಿಯನ್ನ ಪ್ರಶ್ನಿಸಿ ಚುನಾವಣಾ ಆಯೋಗ ಹೈಕೋರ್ಟ್ ಮೆಟ್ಟಿಲೇರಿತ್ತು. ಮೀಸಲಾತಿ, ಕ್ಷೇತ್ರ ವಿಂಗಡಣೆ ವಿಷಯವಾಗಿ ರಾಜ್ಯ ಸರ್ಕಾರ ಒಂದಲ್ಲೊಂದು ಕಾರಣಗಳನ್ನ ಮುಂದಿಟ್ಟು, ಚುನಾವಣೆಯನ್ನ ಮುಂದೂಡತ್ತಲೆ ಸಾಗಿದೆ. ಆದರೆ ಈಗ ಮೀಸಲಾತಿ ಪಟ್ಟಿಯನ್ನು ಚುನಾವಣೆ ಆಯೋಗಕ್ಕೆ ಸಲ್ಲಿಸುವದಾಗಿ ತಿಳಿಸಿದೆ.

ಚುನಾವಣೆ ಆಯೋಗ ಎಪ್ರಿಲ್ ಅಥವಾ ಮೇ ತಿಂಗಳಲ್ಲಿ ಚುನಾವಣೆ ನಡೆಸಲು ಸಿದ್ಧತೆ ಮಾಡಿಕೊಂಡಿದೆ. ಆದರೆ ರಾಜ್ಯ ಸರ್ಕಾರ ತನ್ನ ಮೀಸಲಾತಿ ಪಟ್ಟಿಯನ್ನು ಎರಡು ತಿಂಗಳ ಮೊದಲೇ ಸಲ್ಲಿಕೆ ಮಾಡಿದಲ್ಲಿ ಮಾತ್ರ ಮೇ ತಿಂಗಳಲ್ಲಿ ಚುನಾವಣೆ ನಡೆಸಲು ಸಾಧ್ಯವಾಗುತ್ತದೆ.

ಸರ್ಕಾರ ಮೀಸಲಾತಿ ಪಟ್ಟಿಯನ್ನೇ ಮೇ ತಿಂಗಳಲ್ಲಿ ಸಲ್ಲಿಸುವುದಾಗಿ ಕೋರ್ಟಿಗೆ ಮಾಹಿತಿ ನೀಡಿದೆ. ಅಂದರೆ ಮೇ ತಿಂಗಳಲ್ಲಿ ಚುನಾವಣೆ ನಡೆಯುವುದು ಬಹುತೇಕ ಅನುಮಾನ. ಒಟ್ಟಾರೆ ಸರ್ಕಾರಕ್ಕೆ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆ ನಡೆಸುವ ಇಚ್ಛಾಶಕ್ತಿ ಇಲ್ಲ ಎನ್ನುವುದು ಇದರಿಂದಾಗಿ ಸ್ಪಷ್ಟವಾಗುತ್ತಿದೆ.

ಸಂವಿಧಾನ ರಕ್ಷಕರು, ಮೂರಸ್ಥರದ ಆಡಳಿತ ವಿಕೇಂದ್ರಿಕರಣ ವ್ಯವಸ್ಥೆಯನ್ನು ಜಾರಿಗೊಳಿಸಿದ ಪಕ್ಷ, ಇವತ್ತು ಅದೇ ಮೂರು ಸ್ಥರದ ಆಡಳಿತ ವ್ಯವಸ್ಥೆಯನ್ನು ಸಕಾಲದಲ್ಲಿ ಜಾರಿಗೊಳಿಸಲು ಮುಂದಾಗದಿರುವುದು ಖೇದಕರ.

## ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2023-24 ಮತ್ತು 2024-25 ನೇ ಸಾಲಿಗೆ ಕರ್ನಾಟಕ ಮೇದಾರ ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಬರುವ ಅಲೆಮಾರಿ ಸಮುದಾಯಗಳ ಅಭಿವೃದ್ಧಿ ಅನುಷ್ಠಾನ ಸಮಿತಿಯ ಸರ್ಕಾರ ಜಾರಿಗೆ ತರುವ ಯೋಜನೆಗಳ ಅನುಷ್ಠಾನಕ್ಕೆ ಜಿಲ್ಲಾ ಮಟ್ಟದ ಸಮಿತಿಯಲ್ಲಿ ನಾಮ ನಿರ್ದೇಶಿತ ಸದಸ್ಯರನ್ನು ನೇಮಿಸಲು ಅರ್ಜಿ ಆಹ್ವಾನಿಸಲಾಗಿದೆ.

ನಾಮನಿರ್ದೇಶಿತ ಸದಸ್ಯರನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಮಾಡಲಾಗುತ್ತಿದ್ದು, ಕರ್ನಾಟಕ ಮೇದಾರ ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಬರುವ ಅಲೆಮಾರಿ ಸಮುದಾಯಗಳ ಮುಖಂಡರು ಫೆಬ್ರವರಿ 22 ರೊಳಗಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಗದಗ ಜಿಲ್ಲಾಡಳಿತ ರೂಮ್ ನಂಬರ್. 122/1/ ಎ ಈ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಯೊಂದಿಗೆ ಫೋಟೋ-2, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಹಾಗೂ ರೇಶನ್ ಕಾರ್ಡ್‌ನ್ನು ಲಗತ್ತಿಸಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

## ಉದ್ದೇಶಪೂರ್ವಕ ಕಾಲಹರಣ: ರಾಜು ಕುರುಡಗಿ ಆರೋಪ

**■ವಿಜಯಸಾಕ್ಷಿ ಸುದ್ದಿ, ಗದಗ**



ಗದಗ - ಬೆಟಗೇರಿ ನಗರಸಭೆಯ ಅಧ್ಯಕ್ಷ ಸ್ಥಾನದಲ್ಲಿ ಉಷಾ ದಾಸರ ಅವರ ಮೊದಲ 30 ತಿಂಗಳ ಅವಧಿ ಮುಕ್ತಾಯಗೊಂಡಿದ್ದು, ನಂತರ 2ನೇ ಅವಧಿಗೆ ಚುನಾವಣೆ ನಡೆಸಲು ಆಡಳಿತಾತ್ಮಕವಾಗಿ ಕಾಂಗ್ರೆಸ್ ಸರ್ಕಾರ ವಿನಾಕಾರಣ ಕಾಲಹರಣ ಮಾಡುತ್ತಿದೆ ಎಂದು ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಆರೋಪಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಉದ್ದೇಶಪೂರ್ವಕವಾಗಿ ಮೀಸಲಾತಿಗಾಗಿ 13/12/2024ರಂದು ಧಾರವಾಡ ಹೈಕೋರ್ಟ್‌ನಲ್ಲಿ ರಿಟ್‌ಪಿಟಿಷನ್ ದಾಖಾಲಿಸಿ ಕಾಲಹರಣ ಮಾಡಿತು. ಆದರೆ, ಮಾಡಿದ ಮೀಸಲಾತಿ ಸರಿಯಾಗಿದೆ ಎಂದು ಹೈಕೋರ್ಟ್ ಆದೇಶ ಹೊರಡಿಸಿತು. ನಂತರ ಜಿಲ್ಲಾಡಳಿತದ ಮೇಲೆ ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನದ ಚುನಾವಣೆಯ ದಿನಾಂಕವನ್ನು ನಿಗದಿ ಮಾಡದಂತೆ ಚುನಾವಣಾಧಿಕಾರಿಗಳಿಗೆ ಒತ್ತಡ ತಂದು ದಿನಾಂಕ ನಿಗದಿ ಮಾಡದಂತೆ ಮತ್ತೆ ಕಾಲಹರಣ ಮಾಡಿ ಪುನಃ ಹೈಕೋರ್ಟ್‌ಗೆ ಹೋಗಿ ರಿಟ್ ಅಪೀಲ್ ಮಾಡಿತು.

ರಾಜಕೀಯ ಒತ್ತಡ ತಂದು ಗದಗ-ಬೆಟಗೇರಿ ನಗರಸಭೆಯ ಪೌರಾಯುಕ್ತರು, ಜಿಲ್ಲಾಧಿಕಾರಿಗಳ ಮೂಲಕ ಬಿಜೆಪಿಯ 3 ಜನ ನಗರಸಭಾ ಸದಸ್ಯರನ್ನು ಅನರ್ಹಗೊಳಿಸಿ ತಮ್ಮ ಕುತಂತ್ರ ರಾಜಕಾರಣದಿಂದ ಸಮಂಜಸವಾದ ವಿಚಾರಣೆ ಮಾಡದೆ ಶೀಘ್ರಗತಿಯಲ್ಲಿ ಅಮಾನತು ಆದೇಶ ಹೊರಡಿಸಿದ್ದು, ಅಧಿಕಾರ ದುರಪಯೋಗಪಡೆಸಿಕೊಂಡಿರುವುದು ಸ್ಪಷ್ಟವಾಗಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಹೇಳಿಕೆ ನೀಡಿದ್ದಾರೆ.

## ನಿಧನ



**ಶ್ರೀಮತಿ ರತ್ನವ್ವ ದಿಡ್ಡಿಮನಿ**

ಗದಗ: ತಾಲೂಕಿನ ಹುಯಿಲಗೋಳ ಗ್ರಾಮದ ನಿವಾಸಿ ಶ್ರೀಮತಿ ರತ್ನವ್ವ ಶೇಖರಗೌಡ ದಿಡ್ಡಿಮನಿ (74) ಅವರು ರವಿವಾರ ನಿಧನರಾದರು.

ಮೂವರು ಪುತ್ರರು, ಓರ್ವ ಪುತ್ರಿ ಸೇರಿ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆ ಸೋಮವಾರ (ಫೆ.17) ಸ್ವಗ್ರಾಮ ಹುಯಿಲಗೋಳದಲ್ಲಿ ನೆರವೇರಿತು.

### * ಎಸ್.ಸಿ.ಎಸ್.ಪಿ ಹಾಗೂ ಟಿ.ಎಸ್.ಪಿ. ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಕಾಲಮಿತಿಯಲ್ಲಿ ನಿಗದಿಪಡಿಸಿದ ಗುರಿ ಸಾಧಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪಹಂಚಿಕೆ ಯೋಜನೆಯಡಿ ಅನುಷ್ಠಾನಿತ ಕಾಮಗಾರಿಗಳ ಆರ್ಥಿಕ ಹಾಗೂ ಭೌತಿಕ ಗುರಿಯನ್ನು ನಿಗದಿತ ಕಾಲಮಿತಿಯಲ್ಲಿಯೇ ಸಾಧಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ಶನಿವಾರ ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯಡಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಅರ್ಹ ಫಲಾನುಭವಿಗಳ ಆಯ್ಕೆ ಮಾಡುವಾಗ ಪಾರದರ್ಶಕತೆಯಿರಬೇಕು. ವಿಳಂಬ ಧೋರಣೆ ಮಾಡಬಾರದು. ಎಸ್‌ಸಿ-ಎಸ್‌ಟಿ ಕಾಲೋನಿಯಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಗುಣಮಟ್ಟದ ಕಡೆಗೂ ನಿಗಾವಹಿಸಬೇಕು. ಆಯಾ ಆರ್ಥಿಕ ಸಾಲಿನಲ್ಲಿ ಅನುಷ್ಠಾನಿತ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವತ್ತ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು. ಯಾವುದೇ ಕಾರಣಕ್ಕೂ ಬಿಡುಗಡೆಯಾದ ಅನುದಾನ ಲ್ಯಾಪ್ಸ್ ಆಗದಂತೆ ನೋಡಿಕೊಳ್ಳಬೇಕು. ತಾಲೂಕು ಮಟ್ಟದಲ್ಲಿಯೂ ಸಹ ಎಸ್‌ಸಿಪಿ / ಟಿಎಸ್‌ಪಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯನ್ನು ಕಡ್ಡಾಯವಾಗಿ ನಡೆಸಬೇಕು ಎಂದರು.



ಎಸ್‌ಸಿಪಿ ಟಿಎಸ್‌ಪಿ ಯೋಜನೆಗೆ ಬಿಡುಗಡೆಯಾದ ಅನುದಾನ ದುರ್ಬಳಕೆ, ದುರುಪಯೋಗ ಹಾಗೂ ನಿಗದಿತ ಪ್ರಮಾಣಕ್ಕಿಂತ ಕಡಿಮೆ ಬಳಕೆ ಆಗದೇ ಇರುವಂತೆ ಸಂಬಂಧಿತ ಇಲಾಖೆಯ ಅಧಿಕಾರಿಗಳು ನೋಡಿಕೊಳ್ಳುವುದು ಅವರ ಜವಾಬ್ದಾರಿಯಾಗಿರುತ್ತದೆ. ಇಲ್ಲದಿದ್ದಲ್ಲಿ ಕ್ರಿಮಿನಲ್ ಪ್ರಕರಣವೆಂದು ಪರಿಗಣಿಸಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಸಕಾಲ ಯೋಜನೆಯ ಪ್ರಗತಿ ಪರಿಶೀಲನೆ ನಡೆಸಿದ ಜಿಲ್ಲಾದಿಕಾರಿಗಳು, ಸಕಾಲ ಅನುಷ್ಠಾನದಲ್ಲಿ ಜಿಲ್ಲೆ ಉತ್ತಮ ಪ್ರಗತಿ ಸಾಧಿಸಲು ಎಲ್ಲ ಅಧಿಕಾರಿಗಳು ನಿಗದಿತ ಅವಧಿಯಲ್ಲಿ ಸ್ವೀಕರಿಸಿದ ಅರ್ಜಿಗಳನ್ನು ವಿಲೇವಾರಿ ಮಾಡುವಂತೆ ಸೂಚಿಸಿದರು.

ವಿನಾಕಾರಣ ಸ್ವೀಕರಿಸಿದ ಅರ್ಜಿಗಳನ್ನು ತಿರಸ್ಕರಿಸಬಾರದು. ಸ್ವೀಕರಿಸಿದ ಅರ್ಜಿಗಳನ್ನು ಕಾಲಮಿತಿಯೊಳಗೆ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಬೇಕು. ಲೋಕೋಪಯೋಗಿ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಕಾಲದಲ್ಲಿ ಅರ್ಜಿಗಳ ವಿಲೇವಾರಿ ಸಮರ್ಪಕ ಕೆಲಸ ನಿರ್ವಹಣೆಯಾಗದಿದ್ದರೆ ಸಂಬಂಧಿಸಿದ ಅಧಿಕಾರಿಗಳಿಗೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ್ ಹೆಗ್ಗಳಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿದ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಮಹೇಶ ಪೋತದಾರ ಮಾತನಾಡಿ, ಎಸ್.ಸಿ.ಎಸ್‌ಪಿ ಉಪಹಂಚಿಕೆ ಯೋಜನೆಯಡಿ ಜಿಲ್ಲೆಯಲ್ಲಿ ವಿವಿಧ ಇಲಾಖೆ ಸೇರಿದಂತೆ ಜನವರಿ 2025 ರವರೆಗೆ ಒಟ್ಟಾರೆ 83.01 ಕೋಟಿ ರೂ.ಅನುದಾನ ಬಿಡುಗಡೆಯಾಗಿದ್ದು, ಆ ಪೈಕಿ 71.72 ಕೋಟಿ ರೂ ಖರ್ಚಾಗಿದೆ. 40031 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿದ್ದಾರೆ. ಅದೇ ರೀತಿ ಟಿ.ಎಸ್.ಪಿ. ಯೋಜನೆಯಡಿ ವಿವಿಧ ಇಲಾಖೆ ಸೇರಿದಂತೆ ಜನವರಿ 2025ರವರೆಗೆ 18.71 ಕೋಟಿ ರೂ ಬಿಡುಗಡೆಯಾಗಿದ್ದು, ಆ ಪೈಕಿ 15.68 ಕೋಟಿ ರೂ. ಖರ್ಚಾಗಿದೆ. 17326 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿದ್ದಾರೆ ಎಂದು ಸಭೆಗೆ ತಿಳಿಸಿದರು.

# ವೇದಿಕೆ ಮೇಲ್ಛಾವಣಿ ನಿರ್ಮಾಣಕ್ಕೆ ನೆರವು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಅಡರಕಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಶಾಲೆಯ ಶಿಕ್ಷಕಿ ಪಿ.ಬಿ. ಗುರುಮಠ ಅವರ ಸಹೋದರ, ಅಮೆರಿಕದ ಸ್ಯಾನ್‌ಫ್ರಾನ್ಸಿಸ್ಕೋದಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿರುವ ಪ್ರದೀಪ ಗುರುಮಠ ಹಾಗೂ ದುಬೈನಲ್ಲಿ ನರರೋಗ ತಜ್ಞರಾಗಿರುವ ಡಾ. ವಿನಯ್ ಗುರುಮಠ ಇವರು ತಮ್ಮ ತಾಯಿ ದಿ. ಪುಷ್ಪಾವತಿ ಗುರುಮಠ ಇವರ ಸ್ಮರಣಾರ್ಥ ಅದರಕಟ್ಟಿಯ ಸರಕಾರಿ ಶಾಲೆಗೆ ಕಾರ್ಯಕ್ರಮ ವೇದಿಕೆಗೆ ಮೇಲ್ಛಾವಣಿ ನಿರ್ಮಿಸಿಕೊಡುವ ಮೂಲಕ ಶೈಕ್ಷಣಿಕ ನೆರವಿಗೆ ಕೈಜೋಡಿಸಿದ್ದಾರೆ.



ದಾನಿಗಳ ಆರ್ಥಿಕ ನೆರವಿನಿಂದ ಶಾಲೆಯಲ್ಲಿ ವೇದಿಕೆ ನಿರ್ಮಾಣ ಕಾರ್ಯ ಮಾಡಿರುವದನ್ನು ವೀಕ್ಷಿಸಿದ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಸರ್ಕಾರಿ ಶಾಲೆಗೆ ಮೂಲಭೂತ ಸೌಕರ್ಯ ಒದಗಿಸಲು ದಾನಿಗಳು, ಶಿಕ್ಷಣ ಪ್ರೇಮಿಗಳು, ಸಾರ್ವಜನಿಕರು ಮುಂದಾಗಬೇಕು.

ಆಗ ಸರ್ಕಾರಿ ಶಾಲೆ ಕೂಡ ಎಲ್ಲರ ಮೆಚ್ಚಿನ ಶಿಕ್ಷಣ ಕೇಂದ್ರ ಆಗಬಹುದು. ಗ್ರಾಮಸ್ಥರ ಹಾಗೂ ಶಿಕ್ಷಕರ ಸಹಕಾರದಿಂದ ಶಾಲಾ ಅಭಿವೃದ್ಧಿಗೆ ಶ್ರಮಿಸಲಾಗುತ್ತಿದೆ.

ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ದಿಸೆಯಲ್ಲಿ ಎಲ್ಲರೂ ಕೈಜೋಡಿಸಿದಾಗ ಮಾದರಿ ಶಾಲೆ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯಪಟ್ಟರು. ಇದೇ ಸಂದರ್ಭದಲ್ಲಿ ದಾನಿಗಳಿಗೆ ಮುಖ್ಯೋಪಾಧ್ಯಾಯರಾದ ಎಸ್. ಎಚ್. ಉಮಚಗಿ, ಎಸ್‌ಡಿಎಂಸಿ ಸದಸ್ಯ ಕುಮಾರಣ್ಣ ಚಕ್ರಸಾಲಿ, ಶಿಕ್ಷಕರಾದ ಪಿ.ಸಿ. ಕಾಳಶೆಟ್ಟಿ, ಡಿ.ಡಿ. ಲಮಾಣಿ, ಎಸ್.ಕೆ. ಅಮ್ಮಿನಬಾವಿ, ಪಿ.ಬಿ. ಗುರುಮಠ, ಎಸ್.ಸಿ. ಹಿರೇಮಠ, ಕೆ.ಎಮ್. ಕೊಟ್ರಮ್ಮ, ಎಮ್.ವಾಯ್. ನೀಲನಾಯ್ಕರ, ಎಸ್.ಎಮ್. ಕೌಜಗೇರಿ, ಕಿರಣಕುಮಾರ ಕಲಿವಾಳ, ಎಸ್‌ಡಿಎಂಸಿ ಸಮಿತಿಯ ಸದಸ್ಯರು ಹಾಗೂ ತಾಲೂಕಾಡಳಿತದ ವತಿಯಿಂದ ಧನ್ಯವಾದಗಳನ್ನು ಸಲ್ಲಿಸಲಾಯಿತು.

### ಮಾರ್ಚ್ 12ರಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ

# ಡಾ.ಕವಿತಾ ಮಿಶ್ರಾರಿಗೆ 'ಶ್ರೀ ಜಗದ್ಗುರು ರೇಣುಕಾಚಾರ್ಯ' ಪ್ರಶಸ್ತಿ

**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಮಾರ್ಚ್ 11ರಿಂದ 14ರವರೆಗೆ ವಿವಿಧ ಕಾರ್ಯಕ್ರಮಗಳನ್ನು ಸಂಯೋಜಿಸಲಾಗಿದೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

12-3-2025ರಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ, ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ ಪ್ರದಾನ, ಶಿವಾದ್ವೈತ ಸಮ್ಮೇಳನ ಜರುಗಲಿದೆ.



ಪ್ರತಿ ವರುಷ ಶ್ರೀ ಪೀಠದಿಂದ ಕೊಡ ಮಾಡುವ ಪ್ರತಿಷ್ಠಿತ 'ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ'ಯನ್ನು ರಾಯಚೂರ ಜಿಲ್ಲೆ ಕವಿತಾಳ ಗ್ರಾಮದ ಕೃಷಿಯಲ್ಲಿ ವಿಶೇಷ ಸಾಧನೆಗೈದ ಮಹಿಳೆ ಡಾ. ಕವಿತಾ ಮಿಶ್ರಾ ಇವರಿಗೆ ಪ್ರದಾನ ಮಾಡಲಾಗುವುದೆಂದು ತಿಳಿಸಿದ್ದಾರೆ.

ಶ್ರೀ ಪೀಠದಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮಗಳ ವಿವರಗಳನ್ನು ನೀಡಿರುವ ಅವರು, ಮಾರ್ಚ್ 10ರಂದು ಧ್ವಜಾರೋಹಣ ಮತ್ತು ಹರಿದ್ರಾಲೇಪನ ಹಾಗೂ ವೀರಗಾಸೆ - ಪುರವಂತರ ಸಮ್ಮೇಳನ ನಡೆಯುವುದು. ಮಾರ್ಚ್ 11ರಂದು ದೀಪೋತ್ಸವ-ಕುಂಕುಮೋತ್ಸವ, ಶ್ರೀ ವೀರಭದ್ರಸ್ವಾಮಿ ಚಿಕ್ಕ ರಥೋತ್ಸವ ಹಾಗೂ ಕೃಷಿ ಸಮ್ಮೇಳನ, ಕಾಫಿ-ಅಡಿಕೆ ಬೆಳೆಗಾರರ ಹಿತ ಚಿಂತನ-ಮಂಥನ ಸಮಾರಂಭ ಜರುಗುವುದು.

ಮಾರ್ಚ್ 13ರಂದು ಶಯನೋತ್ಸವ, ಶ್ರೀ ಜಗದ್ಗುರು ಶಿವಾನಂದ ಎಸ್ಟೇಟಿನಲ್ಲಿ ಪೂಜಾ-ಪ್ರಸಾದ, ಕೆಂಡಾರ್ಚನೆ ಹಾಗೂ ಜಾನಪದ ಸಮ್ಮೇಳನ, ಮಾರ್ಚ್ 14 ಪೌರ್ಣಿಮೆ ದಿನದಂದು ವಸಂತೋತ್ಸವ, ಭದ್ರಾ ನದಿ ತೀರದಲ್ಲಿ ಸುರಗಿ ಸಮಾರಾಧನೆ ಜರುಗಲಿದೆ ಎಂದು ಅವರು ತಿಳಿಸಿದ್ದಾರೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಆತ್ಮಬಲದಿಂದ ಎಲ್ಲವೂ ಸಾಧ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಮನುಷ್ಯನಲ್ಲಿ ಆತ್ಮಸ್ಥೈರ್ಯ, ಧೈರ್ಯ, ಸಕಾರಾತ್ಮಕ ಚಿಂತನೆಗಳಿದ್ದರೆ ಮಾತ್ರ ರೋಗಗಳಿಂದ ಮುಕ್ತಿ ಹೊಂದಲು ಸಾಧ್ಯ. ಆತ್ಮಬಲದಿಂದ ಎಲ್ಲವೂ ಸಾಧ್ಯವಿದೆ, ಪರಿಹಾರವಿದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2732ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಉಪನ್ಯಾಸಕರಾಗಿ ಆಗಮಿಸಿದ ಗದುಗಿನ ಸ್ಪರ್ಶ ಆಸ್ಪತ್ರೆಯ ಖ್ಯಾತ ವೈದ್ಯರಾದ ಡಾ. ಧನೇಶ ದೇಸಾಯಿ ಮಾತನಾಡಿ, ಕ್ಯಾನ್ಸರ್ ರೋಗ ಬಹಳ ಅಪಾಯಕಾರಿ. ಅದು ಏಡಿ ಇದ್ದಂತೆ. ಹಿಡಿದರೆ ಬಿಡುವುದಿಲ್ಲ. ಭಾರತದಲ್ಲಿ 15 ಲಕ್ಷ ಜನರು ಹೊಸ ರೋಗಿಗಳು ಪತ್ತೆಯಾಗಿದ್ದಾರೆ. ಕ್ಯಾನ್ಸರ್ ರೋಗ ದೇಹದ ಯಾವುದೇ ಭಾಗದಲ್ಲಿ ಬರಬಹುದು. ಇದು ಒಂದು ಕಡೆ ಬಂದರೆ ದೇಹವನ್ನೆಲ್ಲಾ ವ್ಯಾಪಿಸಿಬಿಡುತ್ತದೆ. ತಂಬಾಕು ಸೇವನೆಯಿಂದ ತುಟಿಗೆ ಬರುತ್ತದೆ. ಅಲ್ಕೋಹಾಲ್‌ನಿಂದ ಲೀವರ್ ಕ್ಯಾನ್ಸರ್ ಬರುತ್ತದೆ. ಎ.ಸಿ ಉಪಯೋಗಿಸುವುದರಿಂದ, ಬಹುಲೈಂಗಿಕ ಕ್ರಿಯೆಯಿಂದ, ಫ್ಯಾಕ್ಟರಿಯಿಂದ, ಬಾಹ್ಯ ಮತ್ತು ಆಂತರಿಕ ಕಾರಣಗಳಿಂದಲೂ ಕ್ಯಾನ್ಸರ್ ಬರಬಹುದು. ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಚರ್ಮ ಕ್ಯಾನ್ಸರ್ ಹೀಗೆ ಅನೇಕ ಪ್ರಕಾರದ ಕ್ಯಾನ್ಸರ್ ಬಗ್ಗೆ ತಿಳಿಸಿ, ಲಕ್ಷಣ ಮತ್ತು ಪರಿಹಾರಗಳ ಬಗ್ಗೆ ಅವಶ್ಯಕ ಮಾಹಿತಿಯನ್ನು ನೀಡಿದರು.



ಮುಖ್ಯ ಅತಿಥಿಗಳಾಗಿ ಮುರುಗೇಶ್ ಬಡ್ನಿ ಉಪಸ್ಥಿತರಿದ್ದರು. ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಹಾಡಿದರು. ಧರ್ಮಗ್ರಂಥ ಪಠಣವನ್ನು ಐಶ್ವರ್ಯ ವಿ.ಕವಿಶೆಟ್ಟಿ, ವಚನ ಚಿಂತನವನ್ನು ಖುಷಿ ಎಂ.ಲಕ್ಕುಂಡಿ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ದಿ. ಮಹಾಂತಪ್ಪ ಬಡ್ನಿ ಇವರ ಸ್ಮರಣಾರ್ಥ ಪುಷ್ಪಲತಾ ಮಹಾಂತಪ್ಪ ಬಡ್ನಿ ಹಾಗೂ ಕುಟುಂಬ ವರ್ಗದವರು ವಹಿಸಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಸಹಚೇರ್ಮನ್ ಶಿವಾನಂದ ಹೊಂಬಳ ಉಪಸ್ಥಿತರಿದ್ದರು.

ಸಮಿತಿಯ ಚೇರ್ಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ಅತಿಥಿಗಳ ಪರಿಚಯ ಡಾ. ಉಮೇಶ ಪುರದ ಮಾಡಿದರು. ಅಶೋಕ್ ಹಾದಿ ಕಾರ್ಯಕ್ರಮ ನಿರೂಪಿಸಿದರು.

ಸರಿಯಾದ ಆಹಾರ ಪದ್ಧತಿ ಅನುಸರಿಸುವದರಿಂದ ಮನುಷ್ಯ ಆರೋಗ್ಯವಾಗಿ ಬದುಕಲು ಸಾಧ್ಯವಾಗುತ್ತದೆ. ಆಹಾರ ಪದ್ಧತಿಯಲ್ಲಿ ವ್ಯತ್ಯಾಸವಾದಾಗ ಅನಾರೋಗ್ಯ ಕಾಡುತ್ತದೆ. ಶರಣರ ವಚನಗಳಲ್ಲಿ ಮನುಷ್ಯನ ಆಹಾರಪದ್ಧತಿಯ ಬಗ್ಗೆ ತಿಳಿಸಿಕೊಟ್ಟಿದ್ದಾರೆ. 'ಕಿರಿದು ಮಾಡಿರಣ್ಣ ಆಹಾರವ, ಕಿರಿದು ಮಾಡಿರಣ್ಣ' ಎಂಬ ವಚನ ಆಹಾರಪದ್ಧತಿಯ ಮಹತ್ವವನ್ನು ತಿಳಿಸಿಕೊಡುತ್ತದೆ. ಕ್ಯಾನ್ಸರ್ ರೋಗ ಮಾರಕವಾದ ರೋಗ. 150 ವರ್ಷಗಳಿಂದ ಕ್ಯಾನ್ಸರ್ ರೋಗಕ್ಕೆ ಪೂರ್ಣಪ್ರಮಾಣದಲ್ಲಿ ಔಷಧಿ ಸಿಕ್ಕಿಲ್ಲ. ದುಶ್ಚಟಗಳಿಂದ ದೂರವಿದ್ದು, ಯೋಗ-ಪ್ರಾಣಾಯಾಮಗಳಿಂದ ಆರೋಗ್ಯ ಕಾಯ್ದುಕೊಳ್ಳಬೇಕು. ಒತ್ತಡರಹಿತ ಜೀವನ ನಮ್ಮದಾಗಬೇಕು ಎಂದು ಶ್ರೀಗಳು ತಿಳಿಸಿದರು.

## ಕಲಿಕೆಯಲ್ಲಿ ಯಶಸ್ಸು ಸಾಧಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿ ಜೀವನವು ಬಂಗಾರದ ಜೀವನವಾಗಿದೆ. ಮಕ್ಕಳು ಉತ್ತಮ ಆರೋಗ್ಯ ಶೈಲಿ ರೂಢಿಸಿಕೊಂಡು ಕಲಿಕೆಯಲ್ಲಿ ಯಶಸ್ಸು ಸಾಧಿಸಬೇಕೆಂದು ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ರೇವಣಸಿದ್ಧೇಶ್ವರ ಉಪ್ಪಿನ ಹೇಳಿದರು. ಅವರು ಗದಗ-ಬೆಟಗೇರಿ ರೋಟರಿ ಕ್ಲಬ್‌ನಿಂದ ಶಾಲಾ ಮಕ್ಕಳ ಆರೋಗ್ಯ ಜಾಗೃತಿ ಕಾರ್ಯಕ್ರಮದಡಿಯಲ್ಲಿ ಬಿಂಕದಕಟ್ಟಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ದಂತ ರಕ್ಷಣೆ ಹಾಗೂ ಕೈ ತೊಳೆಯುವ ಕ್ರಮಗಳನ್ನು ಮಕ್ಕಳಿಗೆ ತಿಳಿಸಿ ಮಾತನಾಡಿದರು. ಹಲ್ಲುಗಳನ್ನು ದಂತಕ್ಷಯದಿಂದ ತಡೆಗಟ್ಟಲು ಸರಿಯಾದ ಸಮಯಕ್ಕೆ ಹಲ್ಲುಜ್ಜಬೇಕು. ಕೈಗಳನ್ನು ಶುಭ್ರವಾಗಿ ವಿಧಾನಗಳನ್ನು ಅನುಸರಿಸಿ ಆಗಾಗ ತೊಳೆದುಕೊಳ್ಳಬೇಕು. ಓದು-ಬರಹ-ಊಟ-ನಿದ್ರೆ ಮತ್ತು ಆಟಗಳನ್ನು ಕ್ರಮಬದ್ಧತೆಯಿಂದ ನಿರ್ವಹಿಸಬೇಕು ಎಂದರು. ಕ್ಲಬ್‌ನ ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಹೊಸಳ್ಳಿಮಠ ಮಾತನಾಡಿ, ಓದಿನೊಂದಿಗೆ ಪಠ್ಯೇತರ ಚಟುವಟಿಕೆಯಲ್ಲಿಯೂ ಮಕ್ಕಳ ಭಾಗವಹಿಸುವಿಕೆ ಅವಶ್ಯವಾಗಿದ್ದು, ಸ್ವಚ್ಛತೆಯ ಕಡೆ ಹೆಚ್ಚು ಗಮನ ಹರಿಸಬೇಕು ಎಂದರು. ಶಾಲಾ ಮುಖ್ಯೋಪಾಧ್ಯಾಯೆ ಶಾಮಲಾ ರಂಗಪ್ಪನವರ ಮಾತನಾಡಿ, ಬಾಲ್ಯದಲ್ಲಿಯೇ ಉತ್ತಮ ಆರೋಗ್ಯ ಪದ್ಧತಿಗಳನ್ನು ಮಕ್ಕಳು ಅಳವಡಿಸಿಕೊಳ್ಳುವದರಿಂದ ಸಧೃಡ ಆರೋಗ್ಯ ಹೊಂದಬಹುದು ಎಂದರು.ಶಾಲಾ ಮಕ್ಕಳಿಗೆ ಗದಗ-ಬೆಟಗೇರಿ ರೋಟರಿ ಕ್ಲಬ್‌ನಿಂದ ಮೇಡಿಮಿಕ್ಸ್ ಸೋಪುಗಳನ್ನು ವಿತರಿಸಲಾಯಿತು. ರೇಣುಕಾ ಬಣೇಣ್ಣವರ ಹಾಗೂ ಯಮುನಾ ಮಕಾಳೆ ಪ್ರಾರ್ಥಿಸಿದರು. ಮಂಜುಳಾ ಹೂಗಾರ ಸ್ವಾಗತಿಸಿ ನಿರೂಪಿಸಿದರು. ಸುಶೀಲಾ ಬೆಳ್ಳಟ್ಟಿ ವಂದಿಸಿದರು. ಸಾವಿತ್ರಿ ಪಿನಾಕೆಮಠ, ದುರ್ಗವ್ವ ತಳವಾರ ಉಪಸ್ಥಿತರಿದ್ದರು.

### ನೂತನ ವಿಗ್ರಹಗಳ ಪ್ರತಿಷ್ಠಾಪನಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಹಣ ಗಳಿಕೆಯೊಂದೇ ಜೀವನದ ಗುರಿಯಲ್ಲ

■ವಿಜಯಸಾಕ್ಷಿ ಸುದ್ದಿ, ಬೇಲೂರು

ಹೊರಗಿನ ಕತ್ತಲೆ ಕಳೆಯಲು ಹೊರಟ ಮನುಷ್ಯ ತನ್ನ ಅಂತರಂಗದಲ್ಲಿಯೇ ಕತ್ತಲೆ ತುಂಬಿಕೊಂಡಿದ್ದಾನೆ. ಹಣ ಗಳಿಕೆಯೊಂದೇ ಜೀವನದ ಗುರಿಯಲ್ಲ. ಬದುಕಲು ಬೇಕಾದ ಜ್ಞಾನವನ್ನು ಸಂಪಾದಿಸುವುದು ಮುಖ್ಯ. ಚಿಂತೆ ಚಿಂತನಗೊಂಡಾಗ ಮಾನವನ ಬದುಕು ಉಜ್ವಲಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಸೋಮವಾರ ತಾಲೂಕಿನ ಪಡವಳಲು ಗ್ರಾಮದಲ್ಲಿ ಶ್ರೀ ಬಸವೇಶ್ವರ ದೇವಾಲಯ ಲೋಕಾರ್ಪಣೆ, ನೂತನ ವಿಗ್ರಹಗಳ ಪ್ರತಿಷ್ಠಾಪನೆ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಉನ್ನತ ಗುರಿ ಮತ್ತು ಧ್ಯೇಯ ವ್ಯಕ್ತಿತ್ವ ವಿಕಾಸಕ್ಕೆ ಆಶಾ ಕಿರಣ. ಧರ್ಮಾಚರಣೆ ಇಲ್ಲದ ವ್ಯಕ್ತಿತ್ವಕ್ಕೆ ಬೆಲೆ ನೆಲೆ ಸಿಗುವುದಿಲ್ಲ. ಯೋಗ್ಯ ಸಂಸ್ಕಾರ ದೊರೆತರೆ ಬೆಲೆಯುಳ್ಳ ಬದುಕು ಸಾರ್ಥಕಗೊಳ್ಳುತ್ತದೆ. ಸೌಹಾರ್ದಯುತ ಸಹಬಾಳ್ವೆ ಜೀವನದ ಪರಮ ಗುರಿಯಾಗಬೇಕು. ಮನುಷ್ಯ ಎಷ್ಟೇ ಎತ್ತರಕ್ಕೆ ಬೆಳೆದರೂ ಮೂಲ ಸಂಸ್ಕೃತಿ ಮರೆಯಬಾರದು. ಮೂಲ ಮರೆತರೆ ಬದುಕಿನಲ್ಲಿ ಸೋಲು ನಿಶ್ಚಿತ. ಮನಸ್ಸು ಪರಿಶುದ್ಧವಾಗಿದ್ದರೆ ಸಂತೋಷ ನೆರಳಿನಂತೆ ಹಿಂಬಾಲಿಸುತ್ತದೆ. ಸದ್ವಿದ್ಯೆ, ಉತ್ತಮ ಸಂಬಂಧ ಮತ್ತು ಆದರ್ಶಮಯ ಸ್ನೇಹ ಇದ್ದರೆ ಬಾಳೆಲ್ಲ



ಸುಖಮಯವಾಗುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಯೌವನ, ಆಯುಷ್ಯ, ಸಿರಿ-ಸಂಪತ್ತು ಶಾಶ್ವತವಲ್ಲ. ಸತ್ಕಾರ್ಯಗಳ ಮೂಲಕ ಬದುಕನ್ನು ಕಟ್ಟಿಕೊಳ್ಳಬೇಕಾಗುತ್ತದೆ. ಮನುಷ್ಯನಲ್ಲಿ ಆತ್ಮ ಬಲ ಬೆಳೆಯಲು ಆಧ್ಯಾತ್ಮದ ಹಸಿವು ಮುಖ್ಯ. ಜಗದ ಕತ್ತಲೆ ಕಳೆಯಲು ಸೂರ್ಯ ಬೇಕು. ಜನರ ಭಾವನೆ ಬೆಳಗಲು ಶ್ರೀ ಗುರುವಿನ ಬೋಧಾಮೃತ ಬೇಕು. ಪಡುವಳಲು ಗ್ರಾಮದ ಸದ್ಭಕ್ತರು ಸುಂದರ ಭವ್ಯ ಮಂದಿರ ನಿರ್ಮಾಣ ಮಾಡಿ ಉದ್ಘಾಟಿಸುತ್ತಿರುವುದು ತಮ್ಮೆಲ್ಲರಲ್ಲಿರುವ ಧರ್ಮ ಶ್ರದ್ಧೆಗೆ ಈ ಸಮಾರಂಭ ಸಾಕ್ಷಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿದರು. ಬೇಲೂರು ಕ್ಷೇತ್ರದ ಶಾಸಕ ಹೆಚ್.ಕೆ. ಸುರೇಶ್ ಸಮಾರಂಭ ಉದ್ಘಾಟಿಸಿ ಮಾತನಾಡಿ, ಬೆಳೆಯುವ ಯುವ ಜನಾಂಗದಲ್ಲಿ ಧರ್ಮ ಪ್ರಜ್ಞೆ ಮತ್ತು ರಾಷ್ಟ್ರ ಪ್ರಜ್ಞೆ ಬೆಳೆಸುವ ಅವಶ್ಯಕತೆಯಿದೆ. ಯುವ ಜನಾಂಗದಲ್ಲಿ ಸಂಸ್ಕಾರ-ಸದ್ವಿಚಾರಗಳು ಬೆಳೆದು ಬದುಕಿನ ಶ್ರೇಯಸ್ಸಿಗೆ ಕಾರಣವಾಗಬೇಕಾಗಿದೆ. ಉತ್ತಮ ಚಿಂತನೆಗಳಿಂದ ಬದುಕು ಸದೃಢಗೊಳ್ಳಲೆಂದರು. ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ಮಾತನಾಡಿ, ಸಕಲ ಜೀವಾತ್ಮರಿಗೆ ಸದಾ ಒಳಿತನ್ನೇ ವೀರಶೈವ ಧರ್ಮ ಪ್ರತಿಪಾದಿಸಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವ ಸಿದ್ಧಾಂತಗಳು ಜೀವನ ಶ್ರೇಯಸ್ಸಿಗೆ ಸಹಕಾರಿಯಾಗಿವೆ ಎಂದರು. ಬೇರುಗಂಡಿ ಬೃಹನ್ಮಠದ ರೇಣುಕ ಮಹಂತ ಶಿವಾಚಾರ್ಯ ಸ್ವಾಮಿಗಳು ಮತ್ತು ಯಸಳೂರು ಚನ್ನಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ವೀರಶೈವ ಧರ್ಮದ ತತ್ವ ತ್ರಯಗಳ ಪರಿಪಾಲನೆಯಿಂದ ಬದುಕು ಬಲಗೊಳ್ಳುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಉದ್ಯಮಿ ಎಸ್.ಹೆಚ್. ರಾಜಶೇಖರ್, ಮಾಜಿ ಶಾಸಕ ಕೆ.ಎಸ್. ಲಿಂಗೇಶ್, ಉದ್ಯಮಿ ಕೊರಟಗೆರೆ ಪ್ರಕಾಶ್, ಸಿದ್ದೇಶ ನಾಗೇಂದ್ರ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರು ರಕ್ಷೆ ಸ್ವೀಕರಿಸಿದರು. ರಾಮೇಗೌಡರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಶಿಕ್ಷಕಿ ಹೇಮಲತಾ ಬಿಕ್ಕೋಡು ಮತ್ತು ಪಡುವಳಲು ಶಿಕ್ಷಕಿ ಕೆ.ಎಸ್. ಲೀಲಾವತಿ ನಿರೂಪಣೆ ಮಾಡಿದರು.

### ಅಡ್ಡಪಲ್ಲಕ್ಕಿ ಮಹೋತ್ಸವ

ಸಮಾರಂಭಕ್ಕೂ ಮುನ್ನ ಪಡುವಳಲು ಗ್ರಾಮದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಬೆಳ್ಳಿ ಅಡ್ಡಪಲ್ಲಕ್ಕಿ ಮಹೋತ್ಸವ ಸಕಲ ವಾದ್ಯ ವೈಭವ, ಕಳಸ-ಕನ್ನಡಿಯೊಂದಿಗೆ ಸಂಭ್ರಮದಿಂದ ಜರುಗಿತು. ಉತ್ಸವದಲ್ಲಿ ಕುಂಭ ಹೊತ್ತ ಮಹಿಳೆಯರು, ಆರತಿ ಹಿಡಿದ ಸುಮಂಗಲೆಯರು, ವೀರಗಾಸೆ ಮತ್ತು ಪುರವಂತರ ಕಲಾ ತಂಡಗಳು ಉತ್ಸವಕ್ಕೆ ಮೆರಗು ತಂದವು. ಸಮಾರಂಭದ ನಂತರ ಎಲ್ಲ ಸದ್ಭಕ್ತರಿಗೆ ಅನ್ನ ದಾಸೋಹ ನೆರವೇರಿತು.

# ಸತತ ಪ್ರಯತ್ನ ವಿದ್ಯಾರ್ಥಿ ಜೀವನದ ಸೂತ್ರವಾಗಲಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿಗಳು ಅಭ್ಯಾಸದಲ್ಲಿ ಆಸಕ್ತಿ, ಸಮಯಪಾಲನೆ ಮತ್ತು ನಿರಂತರತೆ ಹೊಂದಿದ್ದರೆ ತಮ್ಮ ಗುರಿಯನ್ನು ನಿರಾಂತಕವಾಗಿ ಮುಟ್ಟಬಹುದು. ಪರೀಕ್ಷೆಯ ಭಯ ಬಿಟ್ಟು ತಾಳ್ಮೆಯಿಂದ ಪ್ರಶ್ನೆಗಳಿಗೆ ಉತ್ತರಿಸಿ. ಶಿಸ್ತು, ಕಷ್ಟ ಸಹಿಷ್ಣುತೆ ಮತ್ತು ಸತತ ಪ್ರಯತ್ನ ವಿದ್ಯಾರ್ಥಿ ಜೀವನದ ಸೂತ್ರಗಳು ಎಂದು ಸಾಹಿತಿ, ನಿವೃತ್ತ ಶಿಕ್ಷಕ ಎಮ್.ಎಸ್. ಧಡೇಸೂರಮಠ ಹೇಳಿದರು. ಸಮೀಪದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆಯಲ್ಲಿ ಮಹಾ ಸರಸ್ವತಿ ಪೂಜೆ ಹಾಗೂ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ಬಿ.ಆರ್. ಗದುಗಿನ ಮಾತನಾಡಿ, ವಿದ್ಯಾರ್ಥಿಗಳು ಹೆತ್ತ ತಂದೆ-ತಾಯಿ, ಕಲಿತ ಶಾಲೆ, ಕಲಿಸಿದ ಗುರು ಮತ್ತು ಹೊತ್ತ ಭೂಮಿಯ ಋಣ ತೀರಿಸಬೇಕಾದರೆ ಸಮಾಜ ಮೆಚ್ಚುವ ರೀತಿಯಲ್ಲಿ ಉತ್ತಮ ಪ್ರಜೆಗಳಾಗಬೇಕು. ಹಾಗಾಗಬೇಕಾದರೆ ಅಧ್ಯಯನಶೀಲ ಪ್ರವೃತ್ತಿ ಬೆಳೆಸಿಕೊಳ್ಳಬೇಕೆಂದು ಹೇಳಿದರು. ವೇದಿಕೆಯಲ್ಲಿ ಗ್ರಾ.ಪಂ ಅಧ್ಯಕ್ಷೆ ಗಂಗಮ್ಮ ಜಂಗಣ್ಣವರ, ಉಪಾಧ್ಯಕ್ಷೆ ಯಲ್ಲವ್ವ ಮಾದರ, ಎಸ್‌ಡಿಎಮ್‌ಸಿ ಸದಸ್ಯರು ಉಪಸ್ಥಿತರಿದ್ದರು. ಶಿಕ್ಷಕರಾದ ಆರ್.ಡಿ. ಬಡಿಗೇರ, ಪರಶುರಾಮ ಹರಿಜನ, ಕಮಲಮ್ಮ ಜೋಗಿನ, ಶಾಲಾ ಸಿಬ್ಬಂದಿ ಪಾಲ್ಗೊಂಡಿದ್ದರು.



ಈ ಸಂದರ್ಭದಲ್ಲಿ ಶಾಲೆಯಿಂದ ವರ್ಗಾವಣೆಗೊಂಡ ಶಿಕ್ಷಕ ಚಂದ್ರಶೇಖರ ಅಂಬಿಗೇರ, ಶಿಕ್ಷಕಿ ಡಿ.ಎಸ್. ಆಲಮೇಲ ಅವರನ್ನು ಸನ್ಮಾನಿಸಲಾಯಿತು. ಶಿಕ್ಷಕಿ ಗೌರಮ್ಮ ಸ್ವಾಗತಿಸಿದರು.

ಶಿಕ್ಷಕಿ ಯು.ಎಸ್. ಕಣವಿ ವಾರ್ಷಿಕ ವರದಿ ವಾಚಿಸಿದರು. ಶಿಕ್ಷಕಿ ದೀಪಾ ತುಕ್ಕೋಜಿ ಸನ್ಮಾನ ನಿರ್ವಹಿಸಿದರು. ಶಿಕ್ಷಕಿ ಸುನಿತಾ ಪಾಟೀಲ್ ಪ್ರಶಸ್ತಿ ವಿತರಣೆ ನೆರವೇರಿಸಿದರು. ಶಿಕ್ಷಕ ವ್ಹಿ.ವ್ಹಿ. ಅಣ್ಣಿಗೇರಿ ನಿರೂಪಿಸಿದರು. ನೆಹರು ಮನೋಳಿ ವಂದಿಸಿದರು.

## ಶಾಲಾ ಶಿಕ್ಷಣ ಇಲಾಖೆಯ ನೌಕರರ ಜಿಲ್ಲಾ ಸಂಘ ಅಸ್ತಿತ್ವಕ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆಯ ನೌಕರರ ಸಂಘ ಬೆಂಗಳೂರು, ಜಿಲ್ಲಾ ಘಟಕ ಗದಗದ ಪ್ರಥಮ ಕಾರ್ಯನಿರ್ವಹಣಾ ಸಮಿತಿ ಸಭೆಯು ನಗರದ ಮುನ್ಸಿಪಲ್ ಹೈಸ್ಕೂಲಿನಲ್ಲಿ ನೂತನ ಪಶ್ಚಿಮ ಜಿಲ್ಲಾಧ್ಯಕ್ಷ ಡಾ. ಎಸ್.ಎಂ. ಮಠ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಜಿಲ್ಲಾ ಸಂಘದ ಪದಾಧಿಕಾರಿಗಳ ನೇಮಕ ಮತ್ತು ತಾಲೂಕಾ ಘಟಕಗಳಿಗೆ ಪದಾಧಿಕಾರಿಗಳು, ಸದಸ್ಯರ ಆಯ್ಕೆಯ ಬಗ್ಗೆ ಚರ್ಚಿಸಲಾಯಿತು. ಎರಡು-ಮೂರು ದಿನಗಳಲ್ಲಿ ತಾಲೂಕು ಘಟಕದ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಮಾಡಲಾಗುವುದೆಂದು ಸಭೆಗೆ ಮಾಹಿತಿ ನೀಡಿ ಒಗ್ಗಟ್ಟಿನಿಂದ ಸಂಘವನ್ನು ಮುನ್ನಡೆಸಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಗೌರವಾಧ್ಯಕ್ಷ ಶಾಂತಕುಮಾರ ಬಿ.ಭಜಂತ್ರಿ, ಕಾರ್ಯಾಧ್ಯಕ್ಷ ಪ್ರವೀಣಕುಮಾರ ಹಿರೇಮಠ, ಉಪಾಧ್ಯಕ್ಷ ವಿರೇಶ ಕಮ್ಮಾರ, ಕಾರ್ಯದರ್ಶಿ ಎಂ.ಕೆ. ಹುಯಿಲಗೋಳ, ರಾಜ್ಯ ಪರಿಷತ್ ಸದಸ್ಯ ಕಿರಣಕುಮಾರ ಎಸ್. ಮುಂಡರಗಿ, ಖಜಾಂಚಿ ಪುಷ್ಪಾವತಿ ಟಿ.ಬಿಸನಳ್ಳಿ, ಜಂಟಿ ಕಾರ್ಯದರ್ಶಿ ಆರ್.ಬಿ. ಹಾದಿಮನಿ, ಸಂಘಟನಾ ಕಾರ್ಯದರ್ಶಿ ವೀರಣ್ಣ ಅಕ್ಕಿ, ಸುನೀಲ ಲಮಾಣಿ, ಡಾ. ಮಹೇಶ ಕೇರಿ, ರವಿಕುಮಾರ ಜಾಗನೂರ, ಎಸ್.ಎಫ್. ಬೆಳಗಿ, ಸಿ.ಎಸ್. ಹಿರೇಮಠ, ಮಂಜುನಾಥ ಬಳ್ಳಾರಿ ಮತ್ತಿತರರು ಉಪಸ್ಥಿತರಿದ್ದರು.

## ಉದ್ಯಮಶೀಲತಾ ತರಬೇತಿ ಸಮಾರೋಪ ಸಮಾರಂಭ




■ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಬೆಂಗಳೂರು ಇವರ ಪ್ರಾಯೋಜಿಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾಬಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಇವರ ಸಂಕಲ್ಪ ಯೋಜನೆಯಲ್ಲಿ ಗದಗ ಜಿಲ್ಲೆಯ ರಾಷ್ಟ್ರೀಯ ಜೀವನೋಪಾಯದಡಿ ಆಯ್ಕೆಯಾದ ವಿವಿಧ ನಗರ ಸ್ಥಳಿಯ ಸಂಸ್ಥೆ ವ್ಯಾಪ್ತಿಯ ಸ್ವ-ಸಹಾಯ ಸಂಘದ ಮಹಿಳಾ ಸದಸ್ಯರಿಗೆ 5 ದಿನದ ವಸತಿಯುತ ಉದ್ಯಮಶೀಲತಾ ತರಬೇತಿಯ ಸಮಾರೋಪ ಸಮಾರಂಭವನ್ನು ಇತ್ತೀಚೆಗೆ ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳು ಹಾಗೂ ಪ್ರಮಾಣಪತ್ರ ವಿತರಕರಾಗಿ ಆಗಮಿಸಿದ ಸಿಡಾಕ್ ಧಾರವಾಡದ ನಿರ್ದೇಶಕರಾದ ಬಸವರಾಜ ಗೋಟುರ ಮಾತನಾಡಿ, ಈಗಾಗಲೇ ನೀವೆಲ್ಲ ಸ್ವ-ಸಹಾಯ ಸಂಘದ ನೆರವಿನಿಂದ ಚಟುವಟಿಕೆಗಳನ್ನು ಮಾಡುತ್ತಿದ್ದು, ಈ ತರಬೇತಿಯಿಂದ ಅವುಗಳನ್ನು ವಾಣಿಜ್ಯ ಚಟುವಟಿಕೆಗಳನ್ನಾಗಿಸಿ ಉದ್ಯಮಿಯಾಗಬೇಕೆಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಕೃಷಿ ವಿಜ್ಞಾನ ಕೇಂದ್ರದ ಸಲಹೆಗಾರ ಡಾ. ಎಲ್.ಜಿ. ಹಿರೇಗೌಡರ ಮಾತನಾಡುತ್ತ, ಸಿಡಾಕ್ ಸಂಸ್ಥೆ ಮೊದಲಿನಿಂದಲೂ ಉತ್ತಮ ತರಬೇತಿ ನಿಡುತ್ತಾ ಬರುತ್ತಿದೆ. ಮುಂದೆ ಲೇಬಲಿಂಗ್, ಪ್ಯಾಕೇಜಿಂಗ್, ಮಾರುಕಟ್ಟೆ ಹೀಗೆ ಇನ್ನಿತರ ಸಹಾಯ ಬೇಕಾದಲ್ಲಿ ನಮ್ಮನ್ನು ಸಂಪರ್ಕಿಸಿ, ಸತತ ಪ್ರಯತ್ನದಿಂದ ತಾವೆಲ್ಲರೂ ಉದ್ಯಮಿಗಳಾಗಿ ಎಂದು ತಿಳಿಸಿದರು.

ಅತಿಥಿಗಳಾಗಿ ಭಾಗವಹಿಸಿದ ಡೇ-ನಲ್ಮ್ ಜಿಲ್ಲಾ ಅಭಿಯಾನ ವ್ಯವಸ್ಥಾಪಕರಾದ ಅಮರೇಶ ಆರ್ ಯಶಸ್ವಿ ತರಬೇತಿ ಹಮ್ಮಿಕೊಂಡಿದ್ದಕ್ಕಾಗಿ ಸಿಡಾಕ್ ಸಂಸ್ಥೆಯನ್ನು ಅಭಿನಂದಿಸಿದರು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಸಿಡಾಕ್, ಧಾರವಾಡದ ಜಂಟಿ ನಿರ್ದೇಶಕ ಚಂದ್ರಶೇಖರ ಎಚ್.ಅಂಗಡಿ ಮಾತನಾಡಿ, ಈ ತರಬೇತಿ ಯಶಸ್ವಿಯಾಗಲು ಸಂಘದ ಮಹಿಳಾ ಸದಸ್ಯರ ಆಸಕ್ತಿ ಹಾಗೂ ಜಿಲ್ಲೆಯ ಸಿ.ಆರ್.ಪಿ. ಅವರ ಶ್ರಮ ಇದೆ. ಜೊತೆಗೆ ಕೆ.ವಿ.ಕೆಯಲ್ಲಿ ಕಲಿಕಾ ವಾತವರಣ ಇದೆ. ತಾವೆಲ್ಲರೂ ಈ ತರಬೇತಿಯಿಂದ ಮುಂದೆ ಮಹಿಳಾ ಉದ್ಯಮಿಗಳಾಗಿ ಉದ್ಯೋಗ ನೀಡಬೇಕೆಂದು ಹೇಳಿದರು. ತರಬೇತಿ ಕೊನೆಯ ದಿನದ ವಿಷಯಗಳನ್ನು ಸಂಪನ್ಮೂಲ ವ್ಯಕ್ತಿಗಳಾದ ರೂಪಾ ಶಿರಿಯಪ್ಪಗೌಡರ ಹಾಗೂ ಪ್ರವೀಣ ಅಂಗಡಿ ಅವರು ಬೋಧಿಸಿದರು. ತರಬೇತುದಾರ ಮಂಜುನಾಥ ಮುಳಗುಂದ ನಿರೂಪಿಸಿದರು. ವಿಜಯಲಕ್ಷ್ಮೀ ನೆಲ್ಲೂರ ವಂದಿಸಿದರು.


### ಶ್ರೀ ಕಾಳಿಕಾದೇವಿ ದೇವಸ್ಥಾನದ ಸಮುದಾಯ ಭವನ ಉದ್ಘಾಟನಾ ಕಾರ್ಯಕ್ರಮ

# ಕಾಳಿಕಾದೇವಿ ಲಕ್ಷದೀಪೋತ್ಸವ ಫೆ. 19ರಿಂದ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಹೊಸಪೇಟಿ ಓಣಿಯ ಶ್ರೀ ಕಾಳಿಕಾದೇವಿ ದೇವಸ್ಥಾನದ ಲಕ್ಷದೀಪೋತ್ಸವ ಹಾಗೂ ಸಮುದಾಯ ಭವನ ಉದ್ಘಾಟನಾ ಕಾರ್ಯಕ್ರಮಗಳು ಫೆ. 19ರಿಂದ 21ರವರೆಗೆ ನಡೆಯಲಿವೆ.

ಫೆ. 19ರಿಂದ ಪ್ರತಿದಿನ ಬೆಳಗ್ಗೆ ಬ್ರಾಹ್ಮಿ ಮುಹೂರ್ತದಲ್ಲಿ ಶ್ರೀ ಕಾಳಿಕಾ ದೇವಿ ಹಾಗೂ ಮೌನೇಶ್ವರ ಮೂರ್ತಿಗೆ ಪಂಚಾಮೃತಾಭಿಷೇಕ, ಶೋಡೋಷೋಪಚಾರ ಪೂಜಾ ಅಲಂಕಾರದೊಂದಿಗೆ ಮಹಾ ಮಂಗಳಾರತಿ ನೆರವೇರಲಿದೆ. ಸಂಜೆ 6 ಗಂಟೆಗೆ ಮುರನಾಳ ಮಳೇರಾಜೇಂದ್ರಸ್ವಾಮಿ ಮಠದ ಬ್ರಹ್ಮಶ್ರೀ ಜಗನ್ನಾಥ ಸ್ವಾಮಿಗಳ ಸಾನ್ನಿಧ್ಯದಲ್ಲಿ ಗದಗ ವಿರೇಶ್ವರ ಪುಣ್ಯಾಶ್ರಮದ ಡಾ. ಕಲ್ಲಯ್ಯಜ್ಜನವರು, ಹಾಲಕೆರೆ ಸಂಸ್ಥಾನ ಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿ, ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಸ್ವಾಮೀಜಿ, ಗಿಣಗೇರಾದ ಅಭಿನವ ಶ್ರೀಕಂಠ ಸ್ವಾಮೀಜಿ ಇಳಕಲ್ಲದ ವಿಶ್ವನಾಥ ಸ್ವಾಮೀಜಿ, ಹೊಳೆಆಲೂರಿನ ಯಚ್ಚರೇಶ್ವರ ಸ್ವಾಮೀಜಿ, ಲೇಬಗೇರಿಯ ದಿವಾಕರಸ್ವಾಮೀಜಿ, ನರೇಗಲ್ಲದ ಹಜರತ್ ಮಂಜೂರ ಹುಸೇನ ಶಾವಲಿ ಶರಣರ ಸಮ್ಮುಖದಲ್ಲಿ ನಡೆಯುವ ಸಮಾರಂಭವನ್ನು ಧುರೀಣ ಮಿಥುನ ಪಾಟೀಲ ಉದ್ಘಾಟಿಸುವರು.



ಲಕ್ಷದೀಪೋತ್ಸವ ಸಮಿತಿ ಅಧ್ಯಕ್ಷ ಮೌನೇಶ ಹೊಸಮನಿ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಡಾ. ಗಜಾನನ ಕಾಳೆ, ಡಾ. ಬಿ.ಎನ್. ಪಾಟೀಲ, ಶಶಿಕಲಾ ಪಾಟೀಲ, ಪ.ಪಂ ಅಧ್ಯಕ್ಷ ಪಕೀರಪ್ಪ ಮಳ್ಳಿ ಸೇರಿದಂತೆ ಸರ್ವ ಸದಸ್ಯರು ಪಾಲ್ಗೊಳ್ಳುವರು.

ಫೆ. 21ರ ಸಂಜೆ 6ಕ್ಕೆ ಲಕ್ಷ ದೀಪೋತ್ಸವ ನಡೆಯಲಿದ್ದು, ಸಾನ್ನಿಧ್ಯವನ್ನು ಶಿರಹಟ್ಟಿಯ ಫಕೀರ ದಿಂಗಾಲೇಶ್ವರ ಸ್ವಾಮೀಜಿ, ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಸ್ವಾಮೀಜಿ, ಸಿಂಧಗಿಯ ರಾಮಚಂದ್ರ ಸ್ವಾಮೀಜಿ, ಶಾಡಲಗಿಯ ಸೂರ್ಯನಾರಾಯಣ ಸ್ವಾಮೀಜಿ, ಲೇಬಗೇರಿಯ ನಾಗಮೂರ್ತೇಂದ್ರ ಸ್ವಾಮೀಜಿ, ಚಿಕ್ಕುಂಬಿಯ ಅಭಿನವನಾಗಲಿಂಗ ಸ್ವಾಮೀಜಿ, ಹಂಪಸಾಗರದ ಅಭಿನವ ಶಿವಲಿಂಗ ರುದ್ರಮುನಿ ಸ್ವಾಮೀಜಿ ಉಪಸ್ಥಿತರಿರುವರು.

ಹಂಪಿ ವಿಶ್ವವಿದ್ಯಾಲಯದ ಡಾ. ವೀರೇಶ ಬಡಿಗೇರ ಉಪನ್ಯಾಸ ನೀಡಲಿದ್ದು, ಕೆಪಿಸಿಸಿ ರಾಜ್ಯ ಮಹಿಳಾ ಘಟಕದ ಕಾರ್ಯದರ್ಶಿ ಡಾ. ವಸಂತ ಮುರಳಿಆಚಾರ್ಯ ಸಮಾರಂಭದ ಜ್ಯೋತಿ ಬೆಳಗಿಸುವರು. ಅತಿಥಿಗಳಾಗಿ ಸಂಸದ ಪಿ.ಸಿ. ಗದ್ದಿಗೌಡರ, ಲೋಹಶಿಲ್ಪಿ ಹೊನ್ನಪ್ಪಾಚಾರ್ಯ, ಆರ್.ಡಿ. ಕಡ್ಲಿಕೊಪ್ಪ ಉಪಸ್ಥಿತರಿರುವರು ಎಂದು ಶ್ರೀ ಕಾಳಿಕಾದೇವಿ ದೇವಸ್ಥಾನದ ಟ್ರಸ್ಟ್ ಕಮಿಟಿಯ ಪ್ರಕಟಣೆ ತಿಳಿಸಿದೆ.

ಫೆ. 20ರ ಸಂಜೆ ಶ್ರೀ ಕಾಳಿಕಾ ದೇವಿ ಸಮುದಾಯ ಭವನವನ್ನು ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ಉದ್ಘಾಟಿಸುವರು. ಸಾನ್ನಿಧ್ಯವನ್ನು ಶಾಡಲಗೇರಿಯ ತೀರ್ಥೇಂದ್ರ ಸ್ವಾಮೀಜಿ, ನರಗುಂದದ ಡಾ. ಸಿದ್ಧವೀರ ಶಿವಾಚಾರ್ಯರು, ನವಲಗುಂದದ ವೀರೇಂದ್ರ ಸ್ವಾಮೀಜಿ, ಕೊಪ್ಪಳದ ಶಿರಸಪ್ಪಯ್ಯ ಸ್ವಾಮೀಜಿ, ಶಿರೋಳದ ಅಭಿನವ ಯಚ್ಚರ ಸ್ವಾಮೀಜಿ, ಸಿಂಧೂರಿನ ಮಹಾದೇವ ಶಾಸ್ತ್ರಿಗಳ ಸಾನ್ನಿಧ್ಯ ವಹಿಸುವರು. ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕ ಕಳಕಪ್ಪ ಬಂಡಿ ಉಪಸ್ಥಿತರಿರುವರು. ಧಾರವಾಡ ಕ.ವಿ.ವಿ. ನಿ.ಉಪನ್ಯಾಸಕ ಡಾ. ಕೆ.ಪಿ. ವೀರಣ್ಣ ಉಪನ್ಯಾಸ ನೀಡುವರು.

### CPIMನ 24ನೇ ಮಹಾ ಅಧಿವೇಶನದ ರಾಜಕೀಯ ಕರಡು ವರದಿ ಬಿಡುಗಡೆ


# 24ನೇ ಮಹಾ ಅಧಿವೇಶನ ಏ.2ರಿಂದ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಭಾರತ ಕಮ್ಯೂನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಅಕಖಿಂ ಪ್ರಜಾಪ್ರಭುತ್ವದ ಮೇಲೆ ನಂಬಿಕೆ ಇಟ್ಟಿರುವ ಪಕ್ಷವಾಗಿದೆ. ರಾಜಕೀಯ ವ್ಯವಸ್ಥೆಯ ಪ್ರಜಾಪ್ರಭುತ್ವ ಮಾತ್ರವಲ್ಲದೆ, ಪಕ್ಷದ ಆಂತರಿಕ ವಿಚಾರಗಳಲ್ಲೂ ನಿಜವಾದ ಅರ್ಥದಲ್ಲಿ ಪ್ರಜಾಪ್ರಭುತ್ವವನ್ನು ಅಳವಡಿಸಿಕೊಂಡಿದೆ ಎಂದು ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯ ಚಂದ್ರಪ್ಪ ಹೊಸ್ಕೂರ ತಿಳಿಸಿದರು.

ಏಪ್ರಿಲ್ 2ರಿಂದ 6ರವರೆಗೆ ಮಧುರೈನಲ್ಲಿ ನಡೆಯಲಿರುವ ಸಿಪಿಐಎಂ ಪಕ್ಷದ 24ನೇ ಮಹಾ ಅಧಿವೇಶನದ ರಾಜಕೀಯ ಕರಡು ವರದಿಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಪ್ರತಿ 3 ವರ್ಷಗಳಿಗೊಮ್ಮೆ ಪಕ್ಷದ ಎಲ್ಲಾ ಹಂತದ ಸಮ್ಮೇಳನಗಳು ಶಾಖೆಯ ಹಂತದಿಂದ ಅಖಿಲ ಭಾರತದ ಹಂತದವರೆಗೆ ನಡೆಯುತ್ತವೆ. ಪಕ್ಷದ ಮಹಾಧಿವೇಶನ ನಡೆಯುವ 2 ತಿಂಗಳ ಮುಂಚೆ ಪಕ್ಷದ ಕೇಂದ್ರ ಸಮಿತಿಯು ರಾಜಕೀಯ



ನಿರ್ಣಯದ ಕರಡೊಂದನ್ನು ಲಿಖಿತವಾಗಿ ಬಿಡುಗಡೆ ಮಾಡುತ್ತದೆ.

ಈ ಕರಡಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ದೇಶ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಗಿರುವ ರಾಜಕೀಯ, ಸಾಮಾಜಿಕ, ಆರ್ಥಿಕ ಬೆಳವಣಿಗೆಗಳ ವಿಶ್ಲೇಷಣೆ ಮತ್ತು ಮುಂದಿನ 3 ವರ್ಷಗಳಿಗೆ ನಾವು ಕೈಗೊಳ್ಳಬಹುದಾದ ನಿಲುವುಗಳ ಕುರಿತು ವಿವರವಾಗಿ ಚರ್ಚಿಸಲಾಗುತ್ತದೆ ಎಂದು ಹೇಳಿದರು.

ಈ ಎಲ್ಲಾ ತಿದ್ದುಪಡಿಗಳ ಕುರಿತು ಪಕ್ಷದ ಮಹಾಧಿವೇಶನಕ್ಕೆ ಆಯ್ಕೆಯಾದ ಪ್ರತಿನಿಧಿಗಳು ಚರ್ಚಿಸಿ ಕರಡನ್ನು ಅಂತಿಮಗೊಳಿಸುತ್ತಾರೆ. ಇದರ ಆಧಾರದಲ್ಲೇ ಸಿಪಿಐಎಂ ಮುಂದಿನ 3 ವರ್ಷಗಳು ಕೆಲಸ ಮಾಡುತ್ತದೆ ಎಂದರು.

ಈ ವೇಳೆ ಪಕ್ಷದ ಹಿರಿಯ ಮುಖಂಡ ಜಿ.ನಾಗರಾಜ್, ಜಿಲ್ಲಾ ಕಾರ್ಯದರ್ಶಿ ಬಾಲು ರಾಠೋಡ, ಶಾಖಾ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ, ಮೆಹಬೂಬ್ ಹವಾಲ್ದಾರ್, ಪೀರು ರಾಠೋಡ, ಚೆನ್ನಪ್ಪ ಗುಗಲೋತ್ತರ, ಚಂದ್ರು ರಾಠೋಡ, ಗಣೇಶ ರಾಠೋಡ, ರೇಣಪ್ಪ ಕಲ್ಗುಡಿ, ಕರಿಯಮ್ಮ ಗುರಿಕಾರ, ನಜೀರ ಮಾಲ್ದಾರ, ಶಿವಾಜಿ ಗಡ್ಡದ, ಸೇರಿದಂತೆ ಪಕ್ಷದ ಸದಸ್ಯರು ಪಾಲ್ಗೊಂಡಿದ್ದರು.

ಈ ಕರಡನ್ನು ದೇಶದಲ್ಲಿರುವ ಸಿಪಿಐಎಂನ ಎಲ್ಲಾ ಸದಸ್ಯರು ತಮ್ಮ ಶಾಖೆ ಮತ್ತು ಸಮಿತಿಗಳಲ್ಲಿ ಓದಿ, ಚರ್ಚಿಸಿ ಅದರ ಕುರಿತು ತಮ್ಮ ಸ್ಥಳೀಯ ಅನುಭವದ ಆಧಾರದ ಮೇಲೆ ಸಲಹೆ, ತಿದ್ದುಪಡಿಗಳನ್ನು ಸೂಚಿಸುತ್ತಾರೆ. ಇದು ಕೇವಲ ಪಕ್ಷದ ಸದಸ್ಯರುಗಳಿಗೆ ಮಾತ್ರವಲ್ಲದೆ ಕರಡನ್ನು ಬಹಿರಂಗವಾಗಿಯೂ ಬಿಡುಗಡೆ ಮಾಡಿ ಸಾರ್ವಜನಿಕರೂ ಇದನ್ನು ಓದಿ ತಮ್ಮ ಅಭಿಪ್ರಾಯಗಳನ್ನು ನೀಡಲು ಅವಕಾಶಗಳನ್ನು ಕಲ್ಪಿಸಲಾಗಿದೆ ಎಂದು ಚಂದ್ರಪ್ಪ ಹೊಸ್ಕೂರ ತಿಳಿಸಿದರು.

# ಕಾರ್ಮಿಕ ಸಚಿವ ಸಂತೋಷ ಲಾಡ್ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕ ಇಲಾಖೆ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್ ಲಾಡ್ ಅವರು ಫೆಬ್ರವರಿ 18 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಪ್ರವಾಸ ಕಾರ್ಯಕ್ರಮದ ವಿವರ ಈ ಕೆಳಗಿನಂತಿದೆ. ಫೆ. 18 ರಂದು ಬೆಳಿಗ್ಗೆ 7 ಗಂಟೆಗೆ ಧಾರವಾಡದಿಂದ ಹೊರಟು ಗದುಗಿಗೆ ಬೆಳಿಗ್ಗೆ 9 ಗಂಟೆಗೆ ಆಗಮಿಸುವರು. ಬೆಳಿಗ್ಗೆ 9.30 ಗಂಟೆಗೆ ರಾಜ್ಯದ ಕಾನೂನು, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಗದಗ ಜಿಲ್ಲೆಯ ಹುಲಕೋಟಿಯಲ್ಲಿ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಸಮುದಾಯ ಭವನ ಕಟ್ಟಡದ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 10. ಗಂಟೆಯಿಂದ ಮಧ್ಯಾಹ್ನ 10.30 ಗಂಟೆಯವರೆಗೆ ಗದಗ ಜಿಲ್ಲೆಯ ಶಾಸಕರು, ಜಿಲ್ಲಾಧಿಕಾರಿ, ಪೊಲೀಸ್ ವರಿಷ್ಠಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಡನೆ ಗದಗ ಲೋಕೋಪಯೋಗಿ ಇಲಾಖೆಯ ಅತಿಥಿ ಗೃಹದಲ್ಲಿ ಸಭೆ ನಡೆಸುವರು. ಬೆಳಿಗ್ಗೆ 10.30 ಗಂಟೆಯಿಂದ 11.30 ಗಂಟೆಯವರೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗದಗ ಜಿಲ್ಲಾ ಕಾರ್ಮಿಕ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ ಮಾಲೀಕ ವರ್ಗದ ಸಂಘಟನೆಗಳ/ಆಡಳಿತ ವರ್ಗದವರ ಸಭೆ ಜರುಗಿಸುವರು. ಮಧ್ಯಾಹ್ನ 12 ಗಂಟೆಯಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಕಾರ್ಮಿಕ ಸಂಘಟನೆಗಳ ಸಭೆ ನಡೆಸುವರು. ನಂತರ ಪಕ್ಷದ ಕಚೇರಿಗೆ ಭೇಟಿ ನೀಡುವರು. ಮಧ್ಯಾಹ್ನ 1 ಗಂಟೆಗೆ ಗದುಗಿನಿಂದ ಹುಬ್ಬಳ್ಳಿಗೆ ಪ್ರಯಾಣ ನಡೆಸುವರು ಎಂದು ಸಚಿವ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

**ಜಿಲ್ಲಾ ಕಸಾಪ ಹಮ್ಮಿಕೊಂಡಿದ್ದ ಕೆ.ಎಚ್. ಪಾಟೀಲ ದತ್ತಿ ಉಪನ್ಯಾಸದಲ್ಲಿ ಡಾ. ಅರ್ಜುನ ಗೊಳಸಂಗಿ**

# ಜನಾನುರಾಗಿ ಕೆ.ಎಚ್. ಪಾಟೀಲ ಅಜರಾಮರ

■ವಿಜಯಸಾಕ್ಷಿ ಸುದ್ದಿ, ಗದಗ

ಪರಸ್ಪರ ಸಹಕಾರ ಮತ್ತು ಸಹಬಾಳ್ವೆಯಿಂದ ಅಭಿವೃದ್ಧಿ ಸಾಧ್ಯ ಎಂಬುದರಲ್ಲಿ ನಂಬಿಕೆಯನ್ನು ಇಟ್ಟಿದ್ದ ಕೆ.ಎಚ್. ಪಾಟೀಲರು ಸಹಕಾರಿ ಕ್ಷೇತ್ರವನ್ನು ಅಭಿವೃದ್ಧಿಪಡಿಸಿದರು. ಸಹಕಾರಿ ರಂಗದ ಭೀಷ್ಮರೆನಿಸಿಕೊಂಡು ಸಮಾಜೋಪಯೋಗಿ ಕಾರ್ಯಗಳನ್ನು ಮಾಡಿದರು. ಗ್ರಾಮೀಣ ಭಾಗದ ಜನರ ಅಭಿವೃದ್ಧಿಗಾಗಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಶೈಕ್ಷಣಿಕ ಪ್ರಗತಿಗೆ ವಿಶೇಷ ಕೊಡುಗೆಯನ್ನು ನೀಡಿದರು. ಜನೋಪಯೋಗಿ ಕಾರ್ಯಗಳ ಮೂಲಕ ಕೆ.ಎಚ್. ಪಾಟೀಲ ಅಜರಾಮರರಾಗಿದ್ದಾರೆ ಎಂದು ರಾಜ್ಯ ದಲಿತ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ. ಅರ್ಜುನ ಗೊಳಸಂಗಿ ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನದಲ್ಲಿ ಏರ್ಪಡಿಸಿದ್ದ ಕೆ.ಎಚ್. ಪಾಟೀಲರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಕರ್ನಾಟಕ ಸರಕಾರದ ಮಂತ್ರಿಗಳಾಗಿ ಜನರ ಜೀವನಮಟ್ಟವನ್ನು ಸುಧಾರಿಸುವ ಹಿನ್ನೆಲೆಯಲ್ಲಿ ಅನೇಕ ಯೋಜನೆಗಳನ್ನು ಜಾರಿಗೆ ತಂದರು. ಜೊತೆಗೆ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಗದುಗಿನಲ್ಲಿ ಜರುಗಿಸುವ ಮೂಲಕ ಸಾಹಿತ್ಯಾಭಿರುಚಿಯನ್ನು ಮೆರೆದರು ಎಂದು ತಿಳಿಸಿದರು.




ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಎಚ್.ಸಿ.ಇ.ಎಸ್. ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯರಾದ ಬಿ.ಬಿ. ಪಾಟೀಲ ಮಾತನಾಡಿ, ಕೆ.ಎಚ್. ಪಾಟೀಲರು ಬಹುಮುಖ ಆಯಾಮಗಳಲ್ಲಿ ಕಾರ್ಯ ಮಾಡಿ ಜನಮಾನಸದಲ್ಲಿ ಶಾಶ್ವತವಾಗಿ ನೆಲೆ ನಿಂತಿದ್ದಾರೆ ಎಂದು ತಿಳಿಸಿ, ಇದೇ ಸಂದರ್ಭದಲ್ಲಿ ಕೆ.ಎಚ್. ಪಾಟೀಲರ ಹೆಸರಿನ ದತ್ತಿನಿಧಿಗೆ ಹೆಚ್ಚುವರಿಯಾಗಿ 90 ಸಾವಿರ ರೂಪಾಯಿಗಳ ಚೆಕ್‌ನ್ನು ಪರಿಷತ್ತಿನ ಅಧ್ಯಕ್ಷರಿಗೆ ಹಸ್ತಾಂತರಿಸಿದರು.

ದಲಿತ ಸಾಹಿತ್ಯ ಪರಿಷತ್ತಿನ ಮೂಲಕ ಮಾಡಿದ ಕಾರ್ಯವನ್ನು ಮನಗಂಡು ಡಾ. ಅರ್ಜುನ ಗೊಳಸಂಗಿ ಅವರನ್ನು ಹಾಗೂ ತೋಟಗಾರಿಕಾ ಕ್ಷೇತ್ರದ ಸಾಧನೆಗಾಗಿ ಸುರೇಶ ಕುಂಬಾರ ಅವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಡಾ. ದತ್ತಪ್ರಸನ್ನ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರೊ ಕೆ.ಎಚ್. ಬೇಲೂರ, ಸಿ.ಕೆ.ಎಚ್. ಶಾಸ್ತ್ರಿ, ಎಸ್.ಡಿ. ಗಾಂಜಿ, ಅಜಿತ ಘೋರ್ಪಡೆ, ಶಶಿಕಾಂತ ಕೊರ್ಲಹಳ್ಳಿ, ಭಾರತಿ ಕೋಟಿ, ಡಾ. ರಶ್ಮಿ ಅಂಗಡಿ, ಶಿಲ್ಪಾ ಮ್ಯಾಗೇರಿ, ಭಾಗ್ಯಶ್ರೀ ಹುರಕಡ್ಲಿ, ಚಂದ್ರಕಲಾ ಇಟಗಿಮಠ, ಪಾರ್ವತಿ ಬೇವಿನಮರದ, ಎಚ್.ಟಿ. ಸಂಜೀವಸ್ವಾಮಿ, ಅನಂತ ಮೋಹನ ಭಟ್, ಬಸವರಾಜ ವಾರಿ, ಶೇಖಣ್ಣ ಕಳಸಾಪೂರ, ಬಿ.ಬಿ. ಹೊಳಗುಂದಿ, ಬಿ.ವಿ. ಕೊಟ್ಟೂರ, ಜಿ.ಎನ್. ಪಾಟೀಲ, ಎಸ್.ಬಿ. ಮಾಳಗಿಮನಿ, ಲಿಂಗರಾಜ ಪಾಟೀಲ, ಶರಣಪ್ಪ ಹೊಸಂಗಡಿ, ಬಿ.ಎಸ್. ಹಿಂಡಿ, ಜಿ.ವಿ. ಮಳಲಿ, ಜಗನ್ನಾಥ ಟೀಕಾಂದಾರ, ಶಿವಾನಂದ ಭಜಂತ್ರಿ, ಎಂ.ಎಫ್. ಡೋಣಿ, ಪ್ರ.ತೋ. ನಾರಾಯಣಪುರ, ಆರ್.ಡಿ. ಕಪ್ಪಲಿ, ಸುರೇಶ ಕುಂಬಾರ, ಅಶೋಕ ಸತ್ಯರಡ್ಡಿ, ಎಸ್.ಬಿ. ಕಣಗಿನಹಾಳ, ಅ.ದ. ಕಟ್ಟಿಮನಿ, ಸಿ.ಎಂ. ಮಾರನಬಸರಿ, ಎಂ.ಎಂ. ಮಕಾನದಾರ, ಶಕುಂತಲಾ ಸಿಂಧೂರ, ಗುರುದೇವಿ, ಅಕ್ಕಮಹಾದೇವಿ, ರತ್ನಾ ಪುರಂತರ, ಜೆ.ಎ. ಪಾಟೀಲ, ಷಡಕ್ಷರಿ ಮೆಣಸಿನಕಾಯಿ, ಸತೀಶಕುಮಾರ ಚನ್ನಪ್ಪಗೌಡ್ರ, ರವೀಂದ್ರ ಜೋಶಿ, ಗುರುಮೂರ್ತಿ ದೇಶಪಾಂಡೆ, ಕೆ.ಎಸ್. ಜಯದೇವಭಟ್, ಅಮರೇಶ ರಾಂಪೂರ, ದಿನೇಶ ಚನ್ನಪ್ಪಗೌಡ್ರ ಮೊದಲಾದವರು ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕ.ಸಾ.ಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಜನಸೇವೆ, ಸಮಾಜಸೇವೆ ಮಾಡುವ ಅವಕಾಶ ವ್ಯಕ್ತಿಗೆ ದೊರೆತಾಗ ತಾರತಮ್ಯವಿಲ್ಲದೇ ಜನಪರ ಕೆಲಸವನ್ನು ಮಾಡಿದಾಗ ಮಾತ್ರ ವ್ಯಕ್ತಿ ಶಾಶ್ವತವಾಗಿ ನೆಲೆ ನಿಲ್ಲಲು ಸಾಧ್ಯವಾಗುತ್ತದೆ. ಈ ಕಾರ್ಯವನ್ನು ಕೆ.ಎಚ್. ಪಾಟೀಲರು ಮಾಡುವ ಮೂಲಕ ಸಹಕಾರ, ಶಿಕ್ಷಣ, ಕೃಷಿ, ಸಂಘಟನಾ ಕ್ಷೇತ್ರವನ್ನು ಶ್ರೀಮಂತಗೊಳಿಸಿದ್ದಾರೆ. ಅವರ ಸಾಮಾಜಿಕ ಕಳಕಳಿಯನ್ನು ಇಂದಿನ ಯುವಪೀಳಿಗೆ ಹೊಂದಬೇಕಾದುದು ಅಗತ್ಯ ಎಂದು ತಿಳಿಸಿದರು.

# ಆದರ್ಶ ವಿದ್ಯಾಲಯ: ಅರ್ಜಿ ಆಹ್ವಾನ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ಇಟಗಿ ಗ್ರಾಮದ ಸರಕಾರಿ ಆದರ್ಶ ವಿದ್ಯಾಲಯಕ್ಕೆ 2025–26ನೇ ಸಾಲಿನ 6ನೇ ತರಗತಿ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು www.vidyava- hini. karnataka.gov.in ಮತ್ತು www.schooleducation. ಇಚಿಡಿ. ಟಿಭಿ.ಟಿ ವೆಬ್‌ಸೈಟ್ ಮೂಲಕ ದಾಖಲೆಗಳೊಂದಿಗೆ ಫೆ. 28ರೊಳಗಾಗಿ ಅರ್ಜಿ ಸಲ್ಲಿಸಬಹುದು. ಮಾ. 23ರಂದು ಪರೀಕ್ಷೆ ಜರುಗಲಿದ್ದು, ಪ್ರವೇಶ ಪತ್ರಗಳನ್ನು ಮಾ. 15ರಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಮಾಹಿತಿಗೆ ಮುಖ್ಯೋಪಾಧ್ಯಾಯ ಎಫ್.ಎಚ್. ಧಾಲಾಯತ,: 08381–200711 ಇವರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ಕೋರಲಾಗಿದೆ.

# ಉನ್ನತ ವ್ಯಕ್ತಿತವವನ್ನು ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗ್ರಾಮೀಣ ಭಾಗದ ವಿದ್ಯಾರ್ಥಿನಿಯರು ಸಾಕಷ್ಟು ಪ್ರತಿಭೆಯನ್ನು ಹೊಂದಿದ್ದಾರೆ. ಅವರು ಎಲ್ಲರೊಂದಿಗೂ ಸ್ಪರ್ಧಿಸಿ ಗೆಲ್ಲುವ ಶಕ್ತಿಯನ್ನು ಹೊಂದಿದ್ದಾರೆ. ಈ ಶಕ್ತಿಯನ್ನು ಬಳಸಿಕೊಂಡು ಭವಿಷ್ಯದಲ್ಲಿ ಉನ್ನತ ವ್ಯಕ್ತಿತವವನ್ನು ಬೆಳೆಸಿಕೊಳ್ಳಬೇಕೆಂದು ಎಸ್‌ಎವಿವಿಪಿ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಹೇಳಿದರು.

ಪಟ್ಟಣದ ಎಸ್‌ಎವಿವಿಪಿ ಬಾಲಿಕೆಯರ ಪ್ರೌಢಶಾಲೆಯಲ್ಲಿ ಜರುಗಿದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಮಹಿಳೆಯರು ಇಂದು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಎಲ್ಲ ವಿಭಾಗಗಳಲ್ಲಿ ಹೆಸರು ಮಾಡಿದ್ದಾರೆ. ಇದು ನಮ್ಮ ದೇಶಕ್ಕೆ ಹೆಮ್ಮೆ ತರುವ ವಿಚಾರ. ನಾಲ್ಕು ಗೋಡೆಗಳೊಳಗೆ, ಹೊಸ್ತಿಲು ದಾಟದೆ ಇದ್ದ ಮಹಿಳೆ ಈಗ ವಿಶ್ವವ್ಯಾಪಿಯಾಗಿ ಬೆಳೆದಿರುವುದು ನಿಮಗೆಲ್ಲ ಮಾದರಿಯಾಗಬೇಕೆಂದು ದೊಡ್ಡಮೇಟಿ ಹೇಳಿದರು.



ಅಧ್ಯಕ್ಷತೆ ವಹಿಸಿದ್ದ ಶಾಲೆಯ ಚೇರಮನ್ ವೀರಣ್ಣ ಹಳ್ಳಿ ಮಾತನಾಡಿ, ಜೀವನದಲ್ಲಿ ನೀವೆಂದಿಗೂ ಹಿಂಜರಿಕೆ ಹೊಂದಬೇಡಿ. ಧೈರ್ಯದಿಂದ ಮುನ್ನುಗ್ಗುವುದನ್ನು ಕಲಿಯಿರಿ. ಬರುವ ಪರೀಕ್ಷೆಗಳನ್ನೂ ಸಹ ಧೈರ್ಯದಿಂದ ಎದುರಿಸಿ ಉತ್ತಮ ಅಂಕಗಳನ್ನು ಪಡೆದು ಶಾಲೆಗೆ, ಊರಿಗೆ, ನಿಮ್ಮ ಮನೆತನಕ್ಕೆ ಹೆಸರು ತನ್ನಿರಿ ಎಂದರು.

ಮುಖ್ಯೋಪಾಧ್ಯಾಯ ಎಸ್. ಎನ್. ಹೂಲಗೇರಿ ಸ್ವಾಗತಿಸಿದರು. ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಮಧುಶ್ರೀ ಬಿಲೆಕೇರಿ, ಶ್ರೇಯಾ ಬಿಸನಳ್ಳಿ, ಚೇತನಾ ಬೇವಿನಕಟ್ಟಿಯವರನ್ನು ಸನ್ಮಾನಿಸಲಾಯಿತು. ಶಿಕ್ಷಕಿ ಸರೋಜಾ ಧರ್ಮಾಯತ ವರದಿ ವಾಚಿಸಿದರು. ದಾನಿ ಗೋಪಾಲ ಬಿಲೆಕೇರಿಯವರನ್ನು ಸನ್ಮಾನಿಸಲಾಯಿತು.

ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ, ಸದಸ್ಯ ಆರ್.ಜಿ. ಪಾಟೀಲ, ನಿಂಗನಗೌಡ ಲಕ್ಕನಗೌಡ್ರ, ಷಣ್ಮುಖಪ್ಪ ಸಿದ್ನೇಕೊಪ್ಪ, ಉಚಿತ ಪ್ರಸಾದ ನಿಲಯದ ಚೇರಮನ್ ಮಲ್ಲಿಕಾರ್ಜುನಪ್ಪ ಮೆಣಸಿಗಿ, ಶಾಲಾ ಸಿಬ್ಬಂದಿ ಉಪಸ್ಥಿತರಿದ್ದರು. ಶಿಕ್ಷಕ ಎಂ.ಎಸ್. ಅತ್ತಾರ ವಂದಿಸಿದರು.

# ಗಂಗಾ ಕಲ್ಯಾಣ ಯೋಜನೆ ಮಹತ್ವದ್ದಾಗಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರ ಬದುಕು ಹಸನಾಗಿಸುವ ನಿಟ್ಟಿನಲ್ಲಿ ಕೊಳವೆ ಬಾವಿ ಕೊರೆಯಿಸಿ ನೀರಾವರಿ ಸೌಲಭ್ಯ ಕಲ್ಪಿಸುವ ಸರ್ಕಾರದ ಗಂಗಾ ಕಲ್ಯಾಣ ಯೋಜನೆ ಅತ್ಯಂತ ಮಹತ್ವಾದ್ದಾಗಿದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಸೋಮವಾರ ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಡಿ. ದೇವರಾಜು ಅರಸು ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯಡಿಯ ರೈತರ ಜಮೀನಿನಲ್ಲಿ ಬೋರ್‌ವೆಲ್/ಕೊಳವೆಬಾವಿ ಕೊರೆಯಿಸುವ ಕಾರ್ಯಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಲಕ್ಷ್ಮೇಶ್ವರ ತಾಲೂಕು ಕೃಷಿಯನ್ನೇ ಆಧರಿಸಿದ್ದರೂ ನದಿ, ದೊಡ್ಡ ಕೆರೆ, ಬಾವಿಗಳಿಲ್ಲದ್ದರಿಂದ ಒಣ ಬೇಸಾಯವೇ ಪ್ರಧಾನವಾಗಿದೆ. ನೀರಾವರಿಗೆ ಬೋರ್‌ವೆಲ್ ಮಾತ್ರ ಆಧಾರವಾಗಿದ್ದು, ಕ್ಷೇತ್ರದ ರೈತ ಫಲಾನುಭವಿಗಳಿಗೆ ಉಚಿತವಾಗಿ ಕೊಳವೆಬಾವಿ ಕೊರೆಯಿಸಿ, ಪಂಪು-ಮೋಟಾರು ಮತ್ತು ವಿದ್ಯುತ್ ಸಂಪರ್ಕ ಒದಗಿಸಿಕೊಡುವ ಸರ್ಕಾರದ ಗಂಗಾ ಕಲ್ಯಾಣ ಯೋಜನೆ ಆಸರೆಯಾಗಿದೆ. ಸರ್ಕಾರ ಕೆಲವೇ ಜನ ರೈತರಿಗೆ ಈ ಯೋಜನೆ ಕಲ್ಪಿಸುವ ಬದಲಾಗಿ ಆದ್ಯತೆಗೆ ತಕ್ಕಂತೆ ಹೆಚ್ಚಿನ ರೈತರಿಗೆ ಈ ಸೌಲಭ್ಯ ಸಿಗುವಂತಾಗಬೇಕು. ಈ ನಿಟ್ಟಿನಲ್ಲಿ ಸಂಬಂಧಪಟ್ಟ ಸಚಿವರಿಗೆ ಮನವಿ ಮಾಡಲಾಗುವುದು ಎಂದರು.



ಈ ವೇಳೆ ಬಿಜೆಪಿ ರೈತ ಮೋರ್ಚಾದ ಡಿ.ವೈ. ಹುನಗುಂದ, ಮುದಕಣ್ಣ ಗಡದ, ಮಂಜುನಾಥ ತಳವಾರ, ನಟರಾಜ ಪವಾಡದ, ಫಕೀರೇಶ ಕಾಡಣ್ಣವರ, ಮಹೇಶ ಮಾದಾಪೂರ, ಗುರುಬಸವ ಉಳ್ಳಟ್ಟಿ, ಪರಶುರಾಮ ತಳವಾರ, ಕಿರಣ ಲಮಾಣಿ, ಗಣೇಶ ಲಮಾಣಿ ಹಾಗೂ ನಿಗಮದ ಅಧಿಕಾರಿ ಪ್ರದೀಪ ಕೊನ್ನೂರ ಸೇರಿ ಹಲವರಿದ್ದರು.

# ಸೂಕ್ತ ಪರಿಹಾರ ಕಲ್ಪಿಸಲು ಸೂಚನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಿಂದ ಶಿಗ್ಲಿಗೆ ತೆರಳುವ ರಸ್ತೆಗೆ ಹೊಂದಿಕೊಂಡಿರುವ ಜಯಂತಿ ಸೋಮಶೇಖರ ಗಾಂಜಿ ಅವರ ಹೊಲದಲ್ಲಿ ಶನಿವಾರ ರಾತ್ರಿ ಆಕಸ್ಮಿಕ ಬೆಂಕಿ ತಗುಲಿ ನೂರಾರು ಹೆಬ್ಬೇವು ಗಿಡಗಳು ಹಾಗೂ ನೀರಾವರಿ ಡ್ರಿಪ್‌ಸೆಟ್ ಕೇಬಲ್‌ಗಳು ಸುಟ್ಟು ಅಪಾರ ಪ್ರಮಾಣದಲ್ಲಿ ಹಾನಿ ಸಂಭವಿಸಿದ ಹಿನ್ನೆಲೆಯಲ್ಲಿ ಸೋಮವಾರ ಶಾಸಕ ಡಾ. ಚಂದ್ರು ಲಮಾಣಿ ತೋಟಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ಸ್ಥಳದಲ್ಲಿದ್ದ ತಹಸೀಲ್ದಾರ ವಾಸುದೇವ ಸ್ವಾಮಿ ಅವರಿಗೆ ಸೂಕ್ತ ಪರಿಹಾರ ಕಲ್ಪಿಸುವಂತೆ ಸೂಚಿಸಿದರು.



ಗ್ರಾಮ ಆಡಳಿತ ಅಧಿಕಾರಿ ಡಿ.ಎಸ್. ಕುಲಕರ್ಣಿ, ಸೋಮಶೇಖರ ಗಾಂಜಿ, ಕಂದಾಯ, ತೋಟಗಾರಿಕೆ ಇಲಾಖೆ ಅಧಿಕಾರಿಗಳಿದ್ದರು.

# ಮೃತ ವ್ಯಕ್ತಿಯ ನೇತ್ರದಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಕೆ.ಎಸ್. ಆರ್.ಟಿ.ಸಿ ಡಿಪೋ ಹಿಂದಿನ ಪ್ರದೇಶದ ನಿವಾಸಿ ಶ್ರೀಮತಿ ಸಿದ್ಧಲಿಂಗಮ್ಮ ಪಾಂಡುರಂಗರಡ್ಡಿ ಪುಟ್ಟಪ್ಪನವರ (65) ರವಿವಾರ ಸಂಜೆ ನಿಧನರಾದರು. ಕುಟುಂಬದವರ ಒಪ್ಪಿಗೆಯ ಮೇರೆಗೆ ಮೃತರ ನೇತ್ರಗಳನ್ನು ದಾನ ಮಾಡಲಾಯಿತು. ಹುಬ್ಬಳ್ಳಿಯ ಎಂ.ಎಂ. ಜೋಷಿ ಆಸ್ಪತ್ರೆಯ ತಜ್ಞ ಸಿಬ್ಬಂದಿ ನಗರಕ್ಕೆ ಆಗಮಿಸಿ ನೇತ್ರದಾನದ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದರು. ಈ ಸಂದರ್ಭದಲ್ಲಿ ಮಂಜುನಾಥರಡ್ಡಿ ಸೇರಿದಂತೆ ಕುಟುಂಬಸ್ಥರು ಹಾಗೂ ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು ಎಂದು ರಮೇಶ ಶಿಗ್ಲಿ ತಿಳಿಸಿದ್ದಾರೆ.



ಸಾವಿನ ನಂತರ ಕಣ್ಣುಗಳು ಮಣ್ಣಿನಲ್ಲಿ ಮಣ್ಣಾಗದೇ, ಅಗ್ನಿಯಲ್ಲಿ ನಾಶವಾಗದಂತೆ ಮೃತ ವ್ಯಕ್ತಿಯ ಕಣ್ಣುಗಳು ದಾನ ಮಾಡಿದರೆ ಆ ಕಣ್ಣುಗಳು ಕಣ್ಣಿಲ್ಲದ ವ್ಯಕ್ತಿ ಜಗತ್ತನ್ನು ನೋಡಲು ಸಹಾಯಕವಾಗಬಲ್ಲದು. ಲಯನ್ಸ್ ಕ್ಲಬ್ ಕೈಗೊಂಡಿರುವ ಈ ಸಮಾಜಮುಖಿ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ವಿಜಯಕುಮಾರ ಕಳ್ಳಿಗುಡ್ಡ ವಿನಂತಿಸಿದರು.

# ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರು ಹಾಗೂ ಹುಬ್ಬಳ್ಳಿ-ಧಾರವಾಡ ಪೂರ್ವ ವಿಧಾನಸಭಾ ಕ್ಷೇತ್ರದ ಶಾಸಕರಾದ ಪ್ರಸಾದ ಅಬ್ಬಯ್ಯ ಅವರು ಫೆಬ್ರವರಿ 19 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಕೊಳ್ಳಲಿದ್ದು, ವಿವರ ಇಂತಿದೆ. ಫೆಬ್ರವರಿ 19ರಂದು ಮಧ್ಯಾಹ್ನ 2.30 ರಿಂದ ಸಂಜೆ 6 ಗಂಟೆಯವರೆಗೆ ಅಣ್ಣಿಗೇರಿ ಮಾರ್ಗವಾಗಿ ನರಗುಂದ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಕೊಳಚೆ ಪ್ರದೇಶಗಳ ಪರಿವೀಕ್ಷಣೆ ಹಾಗೂ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮನೆಗಳ ಕಾಮಗಾರಿ ಹಾಗೂ ಇನ್ನಿತರ ಅಭಿವೃದ್ಧಿ ಕಾಮಗಾರಿಗಳ ಪರಿವೀಕ್ಷಣೆ ಮತ್ತು ಸಾರ್ವಜನಿಕರ ಕುಂದುಕೊರತೆ ಆಲಿಸುವರು. ನಂತರ ರಾತ್ರಿ 7.30 ಗಂಟೆಗೆ ಹುಬ್ಬಳ್ಳಿಯಲ್ಲಿ ವಾಸ್ತವ್ಯ ಮಾಡುವರು ಎಂದು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಪ್ರಕಟಣೆ ತಿಳಿಸಿದೆ.


ಕರ್ನಾಟಕ ಸರ್ಕಾರ

**ಉಪನಿರ್ದೇಶಕರ ಕಛೇರಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಗದಗ ಜಿಲ್ಲೆ: ಗದಗ**

ಸಂ:ಪಪೂಶಿಇ:ಉನಿಕಗ: :2024–25 ದಿ:–17.02.2025

**ಟೆಂಡರ್ ನೋಟಿಫಿಕೇಷನ್ (ಕೆ.ಪಿ.ಪಿ.ಪಿ ಪೋರ್ಟಲ್ ಮೂಲಕ ಮಾತ್ರ)**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2024–25ನೇ ಸಾಲಿನ ಬಜೆಟ್ ಅನುಮೋದಿತ ಕಾರ್ಯಕ್ರಮದನ್ವಯ ಆದರ್ಶ ವಿದ್ಯಾಲಯಗಳನ್ನು ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳಲ್ಲಿ ಪದವಿ ಪದವಿಪೂರ್ವ ಕಾಲೇಜುಗಳಾಗಿ ಉನ್ನತೀಕರಿಸಿದ ವಿಜಯಪುರ ಜಿಲ್ಲೆಯ 05 ಕಾಲೇಜುಗಳ ಭೌತಶಾಸ್ತ್ರ, ರಸಾಯನಶಾಸ್ತ್ರ ಜೀವಶಾಸ್ತ್ರ ಮತ್ತು ಗಣಕಯಂತ್ರ ಪ್ರಯೋಗಾಲಯಗಳಿಗೆ ಟೇಬಲ್‌ಗಳು ಮತ್ತು ಕಪಾಟುಗಳನ್ನು, ಕುರ್ಚಿ ಮತ್ತು ರ್‍ಯಾಕ್ಸ್‌ಗಳನ್ನು ಸರಬರಾಜು ಮಾಡಲು ಆಸಕ್ತ ಸಂಸ್ಥೆಗಳಿಂದ ಇ-ಟೆಂಡರ್‌ನ್ನು ಆಹ್ವಾನಿಸಲಾಗಿದೆ.

| ಕ್ರ ಸಂ | ವಿವರಗಳು | ಟೆಂಡರ್ ಸಂಖ್ಯೆ | ಮೊತ್ತ ರೂ. ಲಕ್ಷಗಳಲ್ಲಿ |
|---|---|---|---|
| 1 | ಆದರ್ಶ ವಿದ್ಯಾಲಯಗಳನ್ನು ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳಲ್ಲಿ ಪದವಿ ಪದವಿಪೂರ್ವ ಕಾಲೇಜುಗಳಾಗಿ ಉನ್ನತೀಕರಿಸಿದ ಗದಗ ಜಿಲ್ಲೆಯ 02 ಕಾಲೇಜುಗಳಿಗೆ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ಗಣಕಯಂತ್ರ ಪ್ರಯೋಗಾಲಯಗಳಿಗೆ ಟೇಬಲ್‌ಗಳು ಮತ್ತು ಕಪಾಟುಗಳನ್ನು, ಕುರ್ಚಿ ಮತ್ತು ರ್‍ಯಾಕ್ಸ್‌ಗಳು. | PUED/2024-25/IND0080 | 32.00 |

ಪೂರ್ಣಟೆಂಡರ್ ವಿವರಗಳನ್ನು ಅಂತರ್ಜಾಲ https://kppp.karnataka.gov.inನಲ್ಲಿ ವೀಕ್ಷಿಸಬಹುದಾಗಿದ್ದು. ಇ-ಟೆಂಡರ್ ಸಲ್ಲಿಸಲು ಪ್ರಾರಂಭ ದಿನಾಂಕ: **15–02–2025** ಕೊನೆಯ ದಿನಾಂಕ: **01.03.2025 ಸಂಜೆ 4.00** ಗಂಟೆ ಆಗಿದೆ. ಹೆಚ್ಚಿನ ವಿವರಗಳಿಗೆ ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನ್ನು ಹಾಗೂ ಕಛೇರಿ ವೇಳೆಯಲ್ಲಿ ಈ ಕಛೇರಿಯನ್ನು ಸಂಪರ್ಕಿಸುವುದು.

**ಸಹಿ/– ಉಪನಿರ್ದೇಶಕರು**
**ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಗದಗ**

ವಾ.ಸಾ.ಇ/ಗದಗ/624/ದೇಶಪಾಂಡೆಪಬ್ಲಿಸಿಟಿ/2024–25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka